ಸಂಪುಟ : 9 ಸಂಚಿಕೆ 201 ಪುಟ : 4 ಬೆಲೆ: 3.00 ಬುಧವಾರ ಸೆಪ್ಟೆಂಬರ್ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 201 Pages : 4 Price : 3.00 Wednesday september 18 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಿಲ್ಲಾ ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರ ಸೆಪ್ಟೆಂಬರ್ 18 ಹಾಗೂ 19 ರ ಪ್ರವಾಸ ಕಾರ್ಯಕ್ರಮ ಇಂತಿದೆ.

ಸೆಪ್ಟೆಂಬರ್ 18ರಂದು ಬೆ 10.30 ಗಂಟೆಗೆ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಜನತಾ ದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಸೆಪ್ಟೆಂಬರ್ 19 ರಂದು ಮಧ್ಯಾಹ್ನ 9 ಗಂಟೆಗೆ ನಗರದ ಕಳಸಾಪುರ ರಸ್ತೆಯಲ್ಲಿ ಸ್ನಾತಕೋತ್ತರ ಕೇಂದ್ರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಬೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ್ ಕ್ರಿಡಾಂಗಣದಲ್ಲಿ ಗದಗ ತಾಲೂಕಾ ದಸರಾ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಬೆ, 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಸಾಯಂಕಾಲ 4.30 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸುವರು. ಸಂಜೆ 5.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಲಕ್ಕುಂಡಿ ಪ್ರಾಧಿಕಾರದ ಸಭೆಯಲ್ಲಿ ಪಾಲ್ಗೊಳ್ಳುವರು. ರಾತ್ರಿ 10.20 ಗಂಟೆಗೆ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸೆಪ್ಟೆಂಬರ್ 18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 3ರಲ್ಲಿ ನಿಸರ್ಗ ಬಡಾವಣೆ, ಕುಂಬಾರ ಓಣಿ, ಮಿಸ್ಕಿನ್ ಕಂಪೌಂಡ್, ಕೆಲವು ಭಾಗಗಳು. ವಾರ್ಡ್ ನಂ. 21,22 ವಿಜಯನಗರ ಶಾಲೆ, ಟವರ್ ಕಂಬ, ವಾಲ್ಮೀಕಿ ಭವನ, ಕರುಗಲ್ ಲೇಔಟ್, ಕಮತರ ಪ್ಲಾಟ್, ಶಿಗ್ಗಾಂವಿ ಲೇಔಟ್, ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 33ರಲ್ಲಿ ಕೇಶವನಗರ, ಬ್ಯಾಂಕರ್ಸ್ ಕಾಲನಿ, ಲಕ್ಷ್ಮೇಶ್ವರ ರಸ್ತೆ, ಶಿವಾಜಿನಗರ ಮೂರ್ತಿಯ ಭಾಗಗಳು, ಅಂಬೇಡ್ಕರ್ ನಗರ, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 6ರಲ್ಲಿ ಮಾಕಾಪೂರ ಲೈನ್, ಪವರ್ ಲೈನ್, ನಾವಳ್ಳಿ, ಮಳಲಿ ಪೂಜಾರ ಲೈನ್, ಘಣಿಬಂದ & ತಟ್ಟಿಯವರ ಲೈನ್, ವಾರ್ಡ್ ನಂ. 29ರಲ್ಲಿ ನಿಸರ್ಗ ಬಡಾವಣೆ, ಸಾಯಿನಗರ, ಕಲಾಮಂದಿರ ರೋಡ್, ದೇವರಾಜು ಅರಸು ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹದಾಯಿ, ಕಳಸಾ-ಬಂಡೂರಿ, ಕಪ್ಪತಗುಡ್ಡ ರಕ್ಷಣೆಗಾಗಿ ಕರವೇ ಹೋರಾಟ

# ನಾಳೆ ನರಗುಂದ ಪಟ್ಟಣದಿಂದ ಪಾದಯಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಹಲವು ದಶಕಗಳಿಂದ ನೆನೆಗುದಿಗೆ ಬಿದ್ದಿರುವ ಕಳಸಾ-ಬಂಡೂರಿ, ಮಹದಾಯಿ ನದಿ ಜೋಡಣೆ ಯೋಜನೆಯನ್ನು ಅತ್ಯಂತ ಶೀಘ್ರವಾಗಿ ಆರಂಭಿಸುವಂತೆ ಹಾಗೂ ಕಪ್ಪತಗುಡ್ಡವನ್ನು ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಆಗ್ರಹಿಸಿ ಸೆ. 19ರಿಂದ ನರಗುಂದ ಪಟ್ಟಣದ ರಾಣಿ ಚನ್ನಮ್ಮ ಪುತ್ಥಳಿಗೆ ಮಾಲಾರ್ಪಣೆ ಮಾಡುವುದರೊಂದಿಗೆ ಹೋರಾಟ ಆರಂಭಿಸಲಿದ್ದೇವೆ ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾಧ್ಯಕ್ಷ ವೆಂಕಟೇಶ ಆರ್.ಬೇಲೂರ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳಸಾ-ಬಂಡೂರಿ, ಮಹದಾಯಿ ನದಿ ಜೋಡಣೆ ಹಾಗೂ ಕಪ್ಪತಗುಡ್ಡವನ್ನು ಪ್ರವಾಸಿ ತಾಣವನ್ನಾಗಿ ರೂಪಿಸಲು ಆಗ್ರಹಿಸಿ ನರಗುಂದ ಪಟ್ಟಣದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ಮೂಲಕ ಮನವಿ ಸಲ್ಲಿಸಲಿದ್ದೇವೆ. ಪಾದಯಾತ್ರೆಯಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಪ್ರವೀಣ ಶೆಟ್ಟಿ, ಉತ್ತರ ಕರ್ನಾಟಕ ಅಧ್ಯಕ್ಷ ಶರಣು ಗದ್ದುಗೆ, ವಿಶ್ರಾಂತ ಗಣ್ಯ ವ್ಯಕ್ತಿಗಳು ಸೇರಿದಂತೆ ಸಾವಿರಾರು ಸಂಖ್ಯೆಯಲ್ಲಿ ವೇದಿಕೆಯ ಪದಾಧಿಕಾರಿಗಳು, ಸದಸ್ಯರು ಮತ್ತು ರೈತ ಹೋರಾಟಗಾರರು, ಮಹಿಳೆಯರು, ಹಿರಿಯ ನಾಗರಿಕರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕುರ್ಲಗೇರಿ, ತಡಹಾಳ, ನಾಯ್ಕನೂರು ಗ್ರಾಮದ ಮೂಲಕ ಶಲವಡಿ ಗ್ರಾಮದಲ್ಲಿ ವಾಸ್ತವ್ಯ ಮಾಡಲಾಗುವುದು. ಸೆ. 20ರಂದು ಶಲವಡಿ ಗ್ರಾಮದಿಂದ ತುಪ್ಪದಕುರಹಟ್ಟಿ, ವೆಂಕಟಾಪೂರ, ಹೊಂಬಳ ಮೂಲಕ ಗದಗ ಪ್ರವೇಶಿಸಿ ಹೊಂಬಳನಾಕಾ, ಗಂಗಾಪೂರಪೇಟೆ, ಡಿಸಿ ಮಿಲ್ ರೋಡ್, ತಹಸೀಲ್ದಾರ ಕಚೇರಿ, ಗಾಂಧಿ ಸರ್ಕಲ್, ಪುಟ್ಟರಾಜ ಸರ್ಕಲ್, ಬಸವೇಶ್ವರ ಸರ್ಕಲ್, ಬಿಎಸ್‌ಎನ್‌ಎಲ್ ಟವರ್ ರೋಡ್ ಮೂಲಕ ಸಂಚರಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.

ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ದಾವಲಸಾಬ್ ಮುಳಗುಂದ ಮಾತನಾಡಿ, ಕಳಸಾ-ಬಂಡೂರಿ ನಾಲಾ ಜೋಡಣೆಯಿಂದ ರೈತರಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ ರೈತರು ಇನ್ನಿಲ್ಲದ ಸಂಕಷ್ಟ ಅನುಭವಿಸುವಂತಾಗಿದೆ. ಗೋವಾ, ಕರ್ನಾಟಕ ಹಾಗೂ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಇದ್ದರೂ ಈ ಯೋಜನೆ ಕೈಗೆತ್ತಿಕೊಳ್ಳಲು ಆಗಲಿಲ್ಲ. ಕಪ್ಪತಗುಡ್ಡ ರಕ್ಷಣೆಗಾಗಿ ಹೋರಾಟದ ರೂಪುರೇಷೆ ಸಿದ್ಧಪಡಿಸಿದ್ದೇವೆ. ಸೆಪ್ಟೆಂಬರ್ 19ರಂದು ನರಗುಂದ ಪಟ್ಟಣದಿಂದ ಪಾದಯಾತ್ರೆ ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮುತ್ತುರಾಜ್ ಎಸ್. ಅರಗಿನಶೆಟ್ಟಿ, ತಿಮ್ಮಣ್ಣ ಈ.ಡೋಣಿ, ಮಂಜುನಾಥ, ಪರಶುರಾಮ ಬಂಕದಮನಿ, ರಾಜೇಶ್ ಡವಳೆ, ಹನಮಂತಸಾ ಶಿದ್ಲಿಂಗ ಉಪಸ್ಥಿತರಿದ್ದರು.

> ಕನ್ನಡ ನಾಡು, ನುಡಿಗಾಗಿ ನಿರಂತರವಾಗಿ ಹೋರಾಡುತ್ತಿದ್ದೇವೆ. ಕೊರೋನಾ ಸಮಯದಲ್ಲಿ ಎರಡು ವರ್ಷ ಹೋರಾಟಕ್ಕೆ ಸ್ವಲ್ಪ ವಿರಾಮ ನೀಡಿದ್ದೆವು. ಆದರೆ, ಈಗ ಮತ್ತೆ ಹೋರಾಟವನ್ನು ತೀವ್ರಗೊಳಿಸುತ್ತೇವೆ. ಮಹದಾಯಿ, ಕಳಸಾ-ಬಂಡೂರಿ ಹೋರಾಟದ ಜೊತೆಗೆ ಸ್ಥಳೀಯ ಸಮಸ್ಯೆಗಳ ನಿವಾರಣೆಗೂ ಹೋರಾಟ ನಡೆಸಲಿದ್ದೇವೆ. ಸೆ. 19ರಂದು ನಡೆಯುವ ಪಾದಯಾತ್ರೆಯಲ್ಲಿ ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಭಾಗವಹಿಸಲಿದ್ದು, ವಿವಿಧ ಸಂಘಟನೆಯ ಮುಖಂಡರು, ಮಠಾಧೀಶರು ಹೋರಾಟದಲ್ಲಿ ಭಾಗಿಯಾಗಲಿದ್ದಾರೆ.
>
> **- ಪಾಪು ಧಾರೆ.**
> ಬೆಳಗಾವಿ ವಿಭಾಗೀಯ ಅಧ್ಯಕ್ಷ, ಕರವೇ (ಪ್ರವೀಣ ಶೆಟ್ಟಿ ಬಣ)

### ಅಬ್ಬಿಗೇರಿಯಲ್ಲಿ ದಸರಾ ದರ್ಬಾರ್ ವಾಲ್ ಪೋಸ್ಟರ್ ಬಿಡುಗಡೆ

# ಧರ್ಮ ಸಮ್ಮೇಳನ ನಾಡಿನ ಹಬ್ಬವಾಗಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿಗೆ ಸಮೀಪದ ಅಬ್ಬಿಗೇರಿಯಲ್ಲಿ ಅಕ್ಟೋಬರ್ 3ರಿಂದ ಜರುಗಲಿರುವ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ದಸರಾ ದರ್ಬಾರ್ ಕಾರ್ಯಕ್ರಮದ ಪೂರ್ವ ಸಿದ್ಧತೆಯನ್ನು ಸ್ವಾಗತ ಸಮಿತಿ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ದಸರಾ ಧರ್ಮ ಸಮ್ಮೇಳನದ ವಾಲ್ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಈ ಧರ್ಮ ಸಮ್ಮೇಳನ ನಾಡಿನ ಹಬ್ಬವಾಗಿದ್ದು, ಇದು ಗುರುಮನೆ ದಸರಾ ಆಗಿದೆ. ಎಲ್ಲರ ತ್ರಿಕರಣ ಸೇವೆಯಿಂದ ಈ ಮಹಾ ಸಮ್ಮೇಳನ ಯಶಸ್ವಿಯಾಗುವದು. ಈ ಕೈಂಕರ್ಯದಲ್ಲಿ ಎಲ್ಲರ ಸೇವೆ ಅಗತ್ಯ ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಪಾಲಾಕ್ಷಯ್ಯ ಅರಳೆಲೆಮಠ, ಬಸವರಾಜ ಪಲ್ಲೇದ, ಸುರೇಶ ಬಸವರಡ್ಡೇರ, ಬಾಬುಗೌಡ ಪಾಟೀಲ, ಎ.ವಿ. ವೀರಾಪೂರ, ಗುರಣ್ಣ ಅವರಡ್ಡಿ, ಮಂಜು ಅಂಗಡಿ, ಸಿದ್ದು ಹನುಮನಾಳ, ಮಹದೇವಪ್ಪ ಕಂಬಳಿ, ಹನುಮಂತ ದ್ವಾಸಲ, ರಾಮನಗೌಡ ಹಲಕುರ್ಕಿ, ವಿಜಯಕುಮಾರ ಹಿರೇಮಠ, ಈಶಪ್ಪ ನೀರಲೋಟಿ, ದೇವನಗೌಡ ಮುನೇನಕೊಪ್ಪ, ವಿನಾಯಕ ಜೋಶಿ, ಬಸವರಾಜ ಕಮ್ಮಾರ, ಮಲ್ಲೇಶಪ್ಪ ಗದುಗಿನ, ಮಂಜು ಚಿತ್ತರಗಿ, ಭರಮಪ್ಪ ಹನುಮನಾಳ, ಶಿವಣ್ಣ ಗುಗ್ಗರಿ, ದುರುಗೇಶ ಬಂಡಿವಡ್ಡರ, ಸೋಮನಗೌಡ ಕಣವಿ, ರಾಜು ಬೆಂಗಳೂರಶೆಟ್ರ, ಬಸವರಾಜ ಚವಡಿ, ಪ್ರಭು ಸಂಗಟಿ, ಕುಮಾರ ಭೀಮನಗೌಡ್ರ, ಈರಣ್ಣ ಸೊಂಪುರ ಸೇರಿದಂತೆ ಇತರರಿದ್ದರು.

> ಹಿರೇಮಠದ ವೀರಭದ್ರ ಶಿವಾಚಾರ್ಯರು ಮಾತನಾಡಿ, ಮಾನವನು ಧರ್ಮದಲ್ಲಿರಬೇಕು, ಧರ್ಮ ಪರಿಪಾಲನೆ ಮಾಡಬೇಕು. ಆ ಧರ್ಮವು ವಿಶ್ವದಲ್ಲಿ ಶಾಂತಿ ನೆಲೆಸುವಂತಿರಬೇಕು. ಇಂತಹ ಮಾನವೀಯ ಮೌಲ್ಯಗಳನ್ನು ಬಿತ್ತಲು ಧರ್ಮ ಸಮ್ಮೇಳನವು ಸೂಕ್ತ ವೇದಿಕೆಯಾಗಿದೆ ಎಂದರು.

### ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವ ದಿನದ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಸಚಿವ ತಂಗಡಗಿ

# ಕಲ್ಯಾಣ ಕರ್ನಾಟಕವು ಜಾಗತಿಕ ಪರಿವರ್ತನೆಗೆ ಪ್ರೇರಣೆಯಾದ ನೆಲ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಕಲೆ ಮೊದಲಾದ ಕ್ಷೇತ್ರಗಳಿಗೆ ಗಮನಾರ್ಹ ಕೊಡುಗೆ ನೀಡಿದ ಕಲ್ಯಾಣ ಕರ್ನಾಟಕ ಪ್ರದೇಶವು ವಚನ ಕ್ರಾಂತಿಯ ಮೂಲಕ ಬಹುದೊಡ್ಡ ಹೆಸರು ಪಡೆಯಿತು. ಶರಣ ಸಂತರ ಹೋರಾಟದಿಂದಾಗಿ ಜಾಗತಿಕ ಪರಿವರ್ತನೆಗೆ ಕಲ್ಯಾಣ ಕರ್ನಾಟಕದ ನೆಲವು ಪ್ರೇರಣೆಯಾಯಿತು ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಸೆ.17ರಂದು ನಡೆದ ಕಲ್ಯಾಣ ಕರ್ನಾಟಕ ಉತ್ಸವ ದಿನದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ನಮ್ಮ ಕಲ್ಯಾಣ ಕರ್ನಾಟಕ ಭಾಗವು ಈ ಮೊದಲು ನಿಜಾಮರ ಆಳ್ವಿಕೆಯಲ್ಲಿತ್ತು. ಈ ಪ್ರಾಂತ್ಯವನ್ನು ತನ್ನ ಕಪಿಮುಷ್ಠಿಯಲ್ಲಿ ಇಟ್ಟುಕೊಳ್ಳಲು ಬ್ರಿಟಿಷರು ಕುಮ್ಮಕ್ಕು ನೀಡಿದ್ದರು. ಈ ಭಾಗದಲ್ಲಿ ಎಷ್ಟೇ ಹೋರಾಟಗಳಾದರು ಸಹ ನಿಜಾಮನು ಭಾರತ ಒಕ್ಕೂಟಕ್ಕೆ ಸೇರಲು ನಿರಾಕರಿಸಿದನು. ಭಾರತದ ಉಕ್ಕಿನ ಮನುಷ್ಯ ಎಂದೇ ಹೆಸರಾಗಿದ್ದ ಸರ್ದಾರ್ ವಲ್ಲಭ ಬಾಯಿ ಪಟೇಲರು ದಿಟ್ಟತನದಿಂದ ಕೈಗೊಂಡ ಪೊಲೀಸ್ ಕಾರ್ಯಾಚರಣೆಯಲ್ಲಿ ನಿಜಾಮನು ಶರಣಾದನು. ಈ ಪ್ರದೇಶವು 1948ರ ಸೆ.17 ರಂದು ಭಾರತದ ಒಕ್ಕೂಟಕ್ಕೆ ಸೇರಿತು. ನಮ್ಮ ದೇಶದಲ್ಲಿ ಸ್ವಾತಂತ್ರ್ಯ ಹೋರಾಟವು ಹೇಗೆ ನಡೆಯಿತೋ ಅದೇ ರೀತಿ ಹೈದ್ರಾಬಾದ್ ಕರ್ನಾಟಕ ವಿಮೋಚನಾ ಹೋರಾಟವು ಸಹ ನಡೆಯಿತು. ಈ ಭಾಗದಲ್ಲಿ ಸ್ವಾಮಿ ರಮಾನಂದ ತೀರ್ಥರು ಹೈದರಾಬಾದ್ ಕರ್ನಾಟಕ ವಿಮೋಚನಾ ಹೋರಾಟವನ್ನು ಅಹಿಂಸಾತ್ಮಕವಾಗಿ ಪ್ರಾರಂಭಿಸಿದರು. ರಜಾಕರ ಪಡೆಯು ಜನಸಾಮಾನ್ಯರ ಮೇಲೆ ನಿರಂತರವಾಗಿ ಅನ್ಯಾಯ, ದೌರ್ಜನ್ಯ ಮಾಡುತ್ತಿತ್ತು. ಇದನ್ನು ಸಹಿಸದೆ ಈ ಭಾಗದಲ್ಲಿ ಹೋರಾಟಗಳು ನಡೆದವು. ರಾಮಚಂದ್ರಪ್ಪ ವೀರಪ್ಪನವರು, ಶಿವಮೂರ್ತಿಸ್ವಾಮಿ ಅಳವಂಡಿ, ಪುಂಡಲೀಕಪ್ಪ ಜ್ಞಾನಮೋಠೆ, ವೀರಭದ್ರಪ್ಪ ಶಿರೂರು, ಸಿ.ಎಂ. ಚುರ್ಚಿಹಾಳಮಠ, ಸೋಮಪ್ಪ ಡಂಬಳ, ಯರಾಶಿ ಶಂಕ್ರಪ್ಪ, ಎಂ. ವಿರುಪಾಕ್ಷಪ್ಪ, ನರಸಿಂಗರಾವ್, ಜನಾರ್ಧನರಾವ್ ದೇಸಾಯಿ, ದೇವೇಂದ್ರಕುಮಾರ ಹಕಾರಿ, ಡಾ.ಪಂಚಾಕ್ಷರಿ ಹಿರೇಮಠ ಸೇರಿದಂತೆ ಅನೇಕರು ಹೋರಾಟಕ್ಕೆ ಕೈಜೋಡಿಸಿದರು. ಹೀಗೆ ಈ ಭಾಗದ ಹೋರಾಟಗಾರರ ತ್ಯಾಗ ಬಲಿದಾನಗಳಿಂದ ಹೈದ್ರಾಬಾದ್-ಕರ್ನಾಟಕ ವಿಮೋಚನಾ ಹೋರಾಟವು ಈ ನಾಡಿನ ಭವ್ಯ ಇತಿಹಾಸವಾಗಿ ಉಳಿದಿದೆ ಎಂದು ತಿಳಿಸಿದರು.



> ಹೈದ್ರಾಬಾದ್-ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಇದೀಗ 'ಕಲ್ಯಾಣ ಕರ್ನಾಟಕ ಉತ್ಸವ' ದಿನವನ್ನಾಗಿ ಆಚರಿಸಲಾಗುತ್ತಿದೆ. ಹಲವು ಮಹನೀಯರ ತ್ಯಾಗ ಹೋರಾಟದ ಪ್ರತೀಕವಾದ ಈ ಕಲ್ಯಾಣ ಕರ್ನಾಟಕ ಉತ್ಸವ ದಿನದ ಧ್ವಜಾರೋಹಣ ನೆರವೇರಿಸಿರುವುದು ನನ್ನ ಪುಣ್ಯ.
>
> **-ಶಿವರಾಜ ತಂಗಡಗಿ,** ಸಚಿವರು,
> ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ.

ನಮ್ಮ ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಅಭಿವೃದ್ಧಿಗಾಗಿ ವಿಶೇಷ ಅಭಿವೃದ್ಧಿ ಯೋಜನೆಗಳನ್ನು ಜಾರಿ ತಂದಿದೆ. ಇದಕ್ಕಾಗಿಯೇ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಿ ಹಲವಾರು ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ರಾಜ್ಯ ಸರ್ಕಾರವು ಜಾರಿಗೊಳಿಸಿರುವ ಐದು ಗ್ಯಾರಂಟಿ ಯೋಜನೆಗಳಿಂದಾಗಿ ರಾಜ್ಯದ ಜನರು ನೆಮ್ಮದಿಯಿಂದ ಬದುಕುವಂತಾಗಿದೆ. ಈ ನಿಟ್ಟಿನಲ್ಲಿ ಸರ್ವರಿಗು ಸಮಬಾಳು ಸರ್ವರಿಗು ಸಮಪಾಲು ಎನ್ನುವ ಸಾಮಾಜಿಕ ನ್ಯಾಯದ ಪರಿಪಾಲನೆಯನ್ನು ನಾವು ಮಾಡಿದ್ದೇವೆ ಎಂದು ಹೇಳಲು ಹೆಮ್ಮೆ ಅನಿಸುತ್ತದೆ ಎಂದು ತಿಳಿಸಿದರು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಸಂಸದ ಕೆ.ರಾಜಶೇಖರ ಹಿಟ್ನಾಳ್, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ, ನಗರಸಭೆಯ ಅಧ್ಯಕ್ಷ ಅಮ್ಜದ್ ಪಟೇಲ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರೆಡ್ಡಿ ಶ್ರೀನಿವಾಸ, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿ. ಪಂ. ಸಿಇಒ ರಾಹುಲ್ ರತ್ನಂ ಪಾಂಡೆ, ಎಸ್ಪಿ ಡಾ.ರಾಮ್ ಎಲ್. ಅರಸಿದ್ದಿ, ಡಿಎಫ್‌ಒ ಕಾವ್ಯ ಚತುರ್ವೇದಿ, ಎಡಿಸಿ ಸಿದ್ರಾಮೇಶ್ವರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತಕುಮಾರ, ತಹಸೀಲ್ದಾರ ವಿಠ್ಠಲ್ ಚೌಗಲಾ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಇದ್ದರು.

> ಜಿಲ್ಲೆಯಲ್ಲಿ ಗೃಹಜ್ಯೋತಿ ಯೋಜನೆಯಡಿ 2023ರ ಜು.1 ರಿಂದ 2024ರ ಆ.31ರವರೆಗೆ ಒಟ್ಟು 2,73,803 ಗ್ರಾಹಕರು ಲಾಭ ಪಡೆದುಕೊಂಡಿದ್ದಾರೆ. ಗೃಹ ಲಕ್ಷ್ಮಿ ಯೋಜನೆಯಡಿ ಜುಲೈ-2024ರ ಅಂತ್ಯಕ್ಕೆ ಒಟ್ಟು 3,20,150 ಫಲಾನುಭವಿಗಳು ನೋಂದಣಿ ಮಾಡಿಕೊಂಡಿದ್ದು, ಈವರೆಗೆ 3,08,510ಸದಸ್ಯರಿಗೂ ಫಲಾನುಭವಿಗಳು ಮಾಹೆಯಾನ ರೂ.2000 ಪಡೆದುಕೊಳ್ಳುತ್ತಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಒಟ್ಟು 11,74,681 ಸದಸ್ಯರಿಗೆ ಸರ್ಕಾರದ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಂತೆ ಪ್ರತಿ ಸದಸ್ಯರಿಗೆ 5 ಕೆ.ಜಿ. ಆಹಾರ ಧಾನ್ಯವನ್ನು ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ. ಹೆಚ್ಚುವರಿಯಾಗಿ 5 ಕೆ.ಜಿ ಅಕ್ಕಿ ಬದಲಿಗೆ ಪ್ರತಿ ಸದಸ್ಯರಿಗೆ 170 ರೂ. ನೇರ ನಗದು ವರ್ಗಾವಣೆ ಮೂಲಕ ಹಣವನ್ನು ಕುಟುಂಬದ ಮುಖ್ಯಸ್ಥರ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ ಒಟ್ಟು 5,128 ಡಿಪ್ಲೋಮಾ ಹಾಗೂ ಪದವೀಧರರಿಗೆ ರೂ. 2,48,46,000 ಗಳ ನಿರುದ್ಯೋಗ ಭತ್ಯೆಯನ್ನು ಪಾವತಿ ಮಾಡಲಾಗಿದೆ. ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 2023ರ ಜೂನ್ 11 ರಿಂದ ಆಗಸ್ಟ್-2024ರವರೆಗೆ ಒಟ್ಟು 475.74 ಲಕ್ಷ ಮಹಿಳೆಯರು ಪ್ರಯಾಣಿಸಿದ್ದು, ಶಕ್ತಿ ಯೋಜನೆಯ ಲಾಭ ಪಡೆದುಕೊಂಡಿದ್ದಾರೆ.

# ಮೋದಿಯವರಿಂದ ದೇಶದ ಕೀರ್ತಿ ಹೆಚ್ಚಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಹುಟ್ಟಿದ ದಿನದ ಸಮಯವನ್ನು ಜನರ ಸೇವೆಗಾಗಿ ಮೀಸಲಿಡುತ್ತಾರೆ. ಮೋದಿಯವರು ಈ ದೇಶಕ್ಕೆ ದೊರತೆ ದೊಡ್ಡ ಶಕ್ತಿಯಾಗಿದ್ದು, ಅವರ ಮೂಲಕ ಜಗತ್ತಿನಲ್ಲಿ ಭಾರತದ ಕೀರ್ತಿ ಹೆಚ್ಚುವಂತಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರ ಪಟ್ಟಣದಲ್ಲಿ ಮಂಗಳವಾರ ನರೇಂದ್ರ ಮೋದಿ ಅವರ 74ನೇ ಜನ್ಮದಿನದ ಅಂಗವಾಗಿ ಬಿಜೆಪಿ ಶಿರಹಟ್ಟಿ ಮಂಡಳ ಮತ್ತು ಲಕ್ಷ್ಮೇಶ್ವರ ಘಟಕದ ವತಿಯಿಂದ ಸೇವಾ ಪಾಕ್ಷಿಕ ಸ್ವಚ್ಛತಾ ಕಾರ್ಯಕ್ರಮದ ನಿಮಿತ್ತ ಪಟ್ಟಣದ ಪುರಾತನ ಪ್ರಸಿದ್ಧ ಲಕ್ಷ್ಮಣಲಿಂಗ ದೇವಸ್ಥಾನದ ಸುತ್ತಮುತ್ತಲ ಆವರಣವನ್ನು ಸ್ವಚ್ಛಗೊಳಿಸುವ ಕಾರ್ಯವನ್ನು ನೆರವೇರಿಸಿ ಮಾತನಾಡಿದರು.

ಮೋದಿಯವರ ಜನ್ಮ ದಿನದ ಪ್ರಯುಕ್ತ ಸ್ವಚ್ಛತಾ ಅಭಿಯಾನ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಪಕ್ಷದ ಮುಖಂಡರು, ಕಾರ್ಯಕರ್ತರು ಹಮ್ಮಿಕೊಂಡಿದ್ದು, ಪ್ರತಿಯೊಬ್ಬ ಕಾರ್ಯಕರ್ತರೂ ಇದರಲ್ಲಿ ಭಾಗಿಯಾಗಿ ಮೋದಿಯವರ ಜನ್ಮದಿನವನ್ನು ವಿಶಿಷ್ಟ ರೀತಿಯಲ್ಲಿ ಆಚರಿಸಿ ಎಂದರು.

ಕಾರ್ಯಕ್ರಮದ ಅಂಗ ವಾಗಿ ದೇವಸ್ಥಾನದ ಆವರಣದಲ್ಲಿ ಸ್ವತಃ ಶಾಸಕರು ಕಸ ತೆಗೆಯುವ ಮೂಲಕ ಕಾರ್ಯಕರ್ತರಲ್ಲಿ ಉತ್ಸಾಹ ತುಂಬಿದರು. ಗದಗ ಜಿಲ್ಲಾ ಬಿಜೆಪಿ ಖಜಾಂಚಿ ನಾಗರಾಜ ಕುಲಕರ್ಣಿ, ಮಂಡಳದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಪ್ರಧಾನ ಕಾರ್ಯದರ್ಶಿ ಅನಿಲ ಮುಳಗುಂದ, ನಗರ ಘಟಕದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಯುವ ಘಟಕದ ಅಧ್ಯಕ್ಷ ಬಸವರಾಜ ಚಕ್ರಸಾಲಿ, ಮುಖಂಡರಾದ ಎಂ.ಆರ್. ಪಾಟೀಲ, ವಿಜಯಕುಮಾರ ಹತ್ತಿಕಾಳ, ಗಂಗಾಧರ ಮೆಣಸಿನಕಾಯಿ, ನೀಲಪ್ಪ ಹತ್ತಿ, ಶಕ್ತಿ ಕತ್ತಿ, ಸಂಗಮೇಶ ಬೆಳವಲಕೊಪ್ಪ, ಜಗದೀಶ ಪಾಟೀಲ, ನಿಂಗಪ್ಪ ಬನ್ನಿ, ಗಿರೀಶ ಚೌರಡ್ಡಿ, ಸಂತೋಷ ಜಾವೂರ ಸೇರಿದಂತೆ ನೂರಾರು ಕಾರ್ಯಕರ್ತರು ಇದ್ದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

### ಬುಲ್ಡೋಜರ್ ಕಾರ್ಯಾಚರಣೆಗೆ ತಡೆ

ಇನ್ನು ಮುಂದೆ ದೇಶಾದ್ಯಂತ ಪರವಾನಿಗೆ ಇಲ್ಲದೆ ಮನೆ ಸಹಿತ ಯಾವುದೇ ರೀತಿಯ ಕಟ್ಟಡಗಳನ್ನ ಬುಲ್ಡೋಜರ್ ಬಳಸಿ ತೆರವು ಮಾಡದಂತೆ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಆದರೆ ಈ ಆದೇಶ ಅನಧಿಕೃತ ಕಟ್ಟಡಗಳ ತೆರವಿಗೆ ಅನ್ವಯಿಸುವುದಿಲ್ಲ.

ಸುಪ್ರೀಂ ಕೋರ್ಟ್ ಈ ರೀತಿಯ ತೀರ್ಪು ನೀಡಲು ಕಾರಣ ಉತ್ತರ ಪ್ರದೇಶ ಎನ್ನುವುದು ಈಗಾಗಲೇ ಎಲ್ಲರಿಗೂ ಸ್ಪಷ್ಟವಾಗಿದೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಅಪರಾಧಿಗಳ ಮನೆಗಳನ್ನು ಧ್ವಂಸಗೊಳಿಸಿದ ನಂತರ ಇಂಥದ್ದೊಂದು ಪ್ರಕರಣ ಸುಪ್ರೀಂ ಕೋರ್ಟ್ ಮೆಟ್ಟಲೇರಲು ಕಾರಣವಾಯಿತು.

ಆದರೆ ಸುಪ್ರೀಂ ಕೋರ್ಟ್ ಎಲ್ಲಿಯೂ ಉತ್ತರ ಪ್ರದೇಶದ ಹೆಸರನ್ನ ಉಲ್ಲೇಖಿಸಿಲ್ಲ. ಆದರೆ ಇಂತಹ ಪ್ರಕರಣ ನಡೆದಿದ್ದು ಮಾತ್ರ ಉತ್ತರ ಪ್ರದೇಶದಲ್ಲಿ. ಹೀಗಾಗಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪು ನೇರವಾಗಿ ಉತ್ತರ ಪ್ರದೇಶದ ಸರ್ಕಾರಕ್ಕೆ ಚಾಟಿ ಬೀಸಿದಂತಿದೆ.

ತಪ್ಪಿತಸ್ಥರಿಗೆ ಶಿಕ್ಷೆ ಆಗಲೇಬೇಕು. ಅಪರಾಧಿಗಳಿಗೆ ಭಯ ಹುಟ್ಟಿಸುವಂತಹ ಕಾನೂನುಗಳು ಬೇಕು. ಅದಕ್ಕಾಗಿ ಕಾನೂನು, ಸಂವಿಧಾನ, ಪೊಲೀಸ್ ವ್ಯವಸ್ಥೆಯನ್ನು ಬಲಗೊಳಿಸಬೇಕು. ನ್ಯಾಯದಾನ ವ್ಯವಸ್ಥೆ, ತ್ವರಿತಗತಿಯಲ್ಲಿ ನಡೆಯುವಂತಾಗಬೇಕು.

ಇದೆಲ್ಲವನ್ನ ಬಿಟ್ಟು ವಿಚಾರಣೆ ನಡೆಸದೆ, ತನಿಖಾ ಸಂಸ್ಥೆಗಳ ಮೇಲೆ ನಂಬಿಕೆ ಇಲ್ಲದೆ, ಆರೋಪಿಗಳ ಮನೆಗಳನ್ನು ಧ್ವಂಸ ಮಾಡುವುದು ಸಂವಿಧಾನ ವಿರೋಧಿ ಎನ್ನುವುದು ಸುಪ್ರೀಂ ಕೋರ್ಟಿನ ವಾದ.

ಘಟನೆ ಏನೇ ಇರಲಿ, ತಪ್ಪಿತಸ್ಥರಿಗೆ ಶಿಕ್ಷೆ ನೀಡಲು ತನಿಖಾ ಸಂಸ್ಥೆಗಳಿವೆ. ಕೋರ್ಟ್ ಗಳಿವೆ. ಹಾಗೆಲ್ಲ ವ್ಯವಸ್ಥೆಗಳ ಮೇಲೆ ನಂಬಿಕೆ ಇಟ್ಟು ಒಪ್ಪಿಕೊಂಡಿದ್ದೇವೆ. ಅದಾಗಿಯೂ ನ್ಯಾಯ ವ್ಯವಸ್ಥೆಯನ್ನು ಮೀರಿ, ಆರೋಪ ಸಾಬೀತಾಗುವ ಮುನ್ನವೇ ಶಿಕ್ಷಿಸುವುದು ಸಂವಿಧಾನ ವಿರೋಧಿ. ಇದನ್ನೇ ಸುಪ್ರೀಂ ಕೋರ್ಟ್ ಹೇಳಿರುವುದು.

---

ನಿರೀಕ್ಷೆ ಮೀರಿ ಪಾಲ್ಗೊಂಡ ಜನರು । 20 ಸಾವಿರಕ್ಕೂ ಅಧಿಕ ಜನರಿಂದ ಮಾನವ ಸರಪಳಿ

# ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಯಶಸ್ವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಲಕ್ಷ್ಮೇಶ್ವರ ತಾಲೂಕು ವ್ಯಾಪ್ತಿಯ ಬಾಲೆಹೊಸೂರ ಗ್ರಾಮದಿಂದ ಸೂರಣಗಿ ಮಾರ್ಗವಾಗಿ ನೆಲೊಗಲ್ ಗ್ರಾಮದವರೆಗೆ ನಡೆದ ಮಾನವ ಸರಪಳಿ ಕಾರ್ಯಕ್ರಮ ನಿರೀಕ್ಷೆಗೂ ಮೀರಿ ಯಶಸ್ಸು ಕಂಡಿತು. ಶಾಲಾ-ಕಾಲೇಜು ವಿದ್ಯಾರ್ಥಿಗಳು ಶಿಕ್ಷಕರು, ಜನಪ್ರತಿನಿಧಿಗಳು, ಎಲ್ಲ ಇಲಾಖೆಗಳ ನೌಕರರು, ಸಾರ್ವಜನಿಕರು ಸೇರಿ 20 ಸಾವಿರಕ್ಕೂ ಅಧಿಕ ಜನರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವದ ಸಂದೇಶ, ಮೌಲ್ಯಗಳನ್ನು ಸಾರಿದರು.

ಈ ವೇಳೆ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಪ್ರಜಾಪ್ರಭುತ್ವವನ್ನು ಬಲಪಡಿಸಲು ಮತ್ತು ಅದರ ಮೌಲ್ಯಗಳು, ತತ್ವಗಳನ್ನು ಎತ್ತಿ ಹಿಡಿಯಲು ಈ ದಿನವನ್ನು ವಾರ್ಷಿಕವಾಗಿ ಪ್ರಪಂಚದಾದ್ಯಂತ ಆಚರಿಸಲಾಗುತ್ತದೆ. 2007ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ನಿರ್ಣಯವನ್ನು ಅಂಗೀಕರಿಸಿದ ನಂತರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸ್ಥಾಪಿಸಲಾಯಿತು. ಭಾರತದಲ್ಲಿ, ಸಂಸತ್ತು ಅಥವಾ ನ್ಯಾಯಾಂಗವಲ್ಲದ ಸಂವಿಧಾನವೇ ಸರ್ವೋಚ್ಚವಾಗಿದೆ. ಭಾರತವು ಲಿಖಿತ ಸಂವಿಧಾನವನ್ನು ಹೊಂದಿದೆ. ಇದರಲ್ಲಿ ನಾಗರಿಕರ ಹಕ್ಕುಗಳು, ಸ್ವಾತಂತ್ರ್ಯ ಮತ್ತು ಕರ್ತವ್ಯಗಳನ್ನು ಸ್ಪಷ್ಟವಾಗಿ ವ್ಯಾಖ್ಯಾನಿಸಲಾಗಿದೆ. ಇದು ಇತರ ದೇಶಗಳಿಗಿಂತ ಭಿನ್ನವಾಗಿ ಎಂದು ಹೇಳಿದ ಅವರು, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ನಮ್ಮ ಕ್ಷೇತ್ರದಲ್ಲಿ ಅಭೂತಪೂರ್ವ ಯಶಸ್ಸು ಕಂಡಿದೆ. ಇದಕ್ಕೆ ಶ್ರಮಿಸಿದ ಸರ್ವರಿಗೂ ಧನ್ಯವಾದಗಳನ್ನು ಅರ್ಪಿಸುವದಾಗಿ ಹೇಳಿದರು.

ನಿಗದಿತ ವೇಳಾಪಟ್ಟಿಯಂತೆ ಎಲ್ಲ ಕಾರ್ಯಕ್ರಮಗಳು ಸುಗಮವಾಗಿ ನಡೆದವು. ಸೇರಿದ್ದ ಸಾವಿರಾರು ಜನರು ನಾಡಗೀತೆ ಹಾಡಿ, ಸಂವಿದಾನ ಪೀಠಿಕೆ, ಪ್ರತಿಜ್ಞಾವಿಧಿ ಓದಿದರು. ಮಾನವ ಸರಪಳಿಯಲ್ಲಿಯೇ ತಮ್ಮ ಎರಡೂ ಕೈಗಳನ್ನು ಮೇಲೆತ್ತಿ 'ಜೈ ಹಿಂದ್, ಜೈ ಕರ್ನಾಟಕ' ಘೋಷಣೆ ಕೂಗಿ ಸರಪಳಿಯನ್ನು ಕಳಚುವುದರ ಮೂಲಕ ಕಾರ್ಯಕ್ರಮ ಮುಕ್ತಾಯಗೊಳಿಸಲಾಯಿತು. ಈ ವೇಳೆ ಅರಣ್ಯ ಇಲಾಖೆಯ ಸಹಕಾರದೊಂದಿಗೆ ರಸ್ತೆ ಬದಿಗಳಲ್ಲಿ ನೂರಾರು ಸಸಿಗಳನ್ನು ನೆಡಲಾಯಿತು. ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ, ಇಓ ಕೃಷ್ಣಪ್ಪ ಧರ್ಮರ, ಸಿಪಿಐ ನಾಗರಾಜ ಮಾಡಳ್ಳಿ, ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ಬಾಲೇಹೊಸೂರು ಗ್ರಾ.ಪಂ ಅಧ್ಯಕ್ಷೆ ಚನ್ನವ್ವ ಮೈಲಾರಿ, ಉಪಾಧ್ಯಕ್ಷೆ ರೇಖಾ ನೆನಗನಹಳ್ಳಿ, ಆಹಾರ ಇಲಾಖೆ ನಿರ್ದೇಶಕರು, ಜಿಲ್ಲಾ ಯೋಜನಾ ನಿರ್ದೇಶಕರು, ತಾಲೂಕು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಶಾಲಾ ಕಾಲೇಜು ಶಿಕ್ಷಕರು, ಉಪನ್ಯಾಸಕರು, ಸಾವಿರಾರು ವಿದ್ಯಾರ್ಥಿಗಳು, ಸಿಬ್ಬಂದಿಗಳು ಹಾಜರಿದ್ದರು. ಆರಂಭದಲ್ಲಿ ಚಂದನ ಸ್ಕೂಲ್‌ನ ಮ್ಯೂಜಿಕ್ ಬ್ಯಾಂಡ್ ಕಂಪನಿಯಿಂದ ನಾಡಗೀತೆ ನುಡಿಸಿ ಗಮನ ಸೆಳೆದರು.

> ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಯಶಸ್ಸು ಇಡಿಯ ತಾಲೂಕಿನ ಸಮಸ್ತ ಜನರಿಗೆ ಸೇರುತ್ತದೆ. ನಿರೀಕ್ಷೆಯನ್ನು ಮೀರಿ ಜನರು ಪಾಲ್ಗೊಂಡಿರುವದು, ಜನಪ್ರತಿನಿಧಿಗಳು, ಸ್ಥಳೀಯ ಜನಪ್ರತಿನಿಧಿಗಳು, ಮುಖಂಡರು, ಶಿಕ್ಷಕರು ಸಾರ್ವಜನಿಕರ ಬೆಂಬಲಕ್ಕೆ ಆಡಳಿತದ ಪರವಾಗಿ ಧನ್ಯವಾದಗಳನ್ನು ಅರ್ಪಿಸುತ್ತೇವೆ.
>
> – ವಾಸುದೇವ ಸ್ವಾಮಿ.
> ತಹಸೀಲ್ದಾರರು, ಲಕ್ಷ್ಮೇಶ್ವರ.



---

## ಶಿಕ್ಷಕಿಯರು, ವಿದ್ಯಾರ್ಥಿಗಳ ಮೇಲೆ ಹೆಜ್ಜೇನು ದಾಳಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರ ಗ್ರಾಮದಲ್ಲಿ ಭಾನುವಾರ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಾರ್ವಜನಿಕರು ಹೆಜ್ಜೇನು ದಾಳಿಗೊಳಗಾದ ಘಟನೆ ನಡೆದಿದೆ.

ಮಾನವ ಸರಪಳಿ ಕಾರ್ಯಕ್ರಮ ಮುಗಿಯುತ್ತಿದ್ದಂತೆ ತಮ್ಮ ತಮ್ಮ ವಾಹನದ ಕಡೆಗೆ ಹೆಜ್ಜೆ ಹಾಕುತ್ತಿದ್ದ ಮಕ್ಕಳು ಮತ್ತು ಶಿಕ್ಷಕರು, ಸಾರ್ವಜನಿಕರ ಮೇಲೆ ರಸ್ತೆಯ ಬದಿಯ ಮರದಲ್ಲಿನ ಗೂಡು ಕಟ್ಟಿದ್ದ ಜೇನು ಗೂಡಿಗೆ ಯಾರೋ ಕಿಡಿಗೇಡಿಗಳು ತೆ-ೂಂದರೆ ಮಾಡಿದ್ದಾರೆ. ಏಕಾಏಕಿ ಜೇನುಹುಳುಗಳು ದಾಳಿ ಮಾಡುತ್ತಿದಂತೆ ಗಲಿಬಿಲಿಗೊಂಡ ವಿದ್ಯಾರ್ಥಿಗಳು ಶಿಕ್ಷಕರು ಹೊಲದಲ್ಲಿ ದಿಕ್ಕಾಪಾಲಾಗಿ ಓಡಿದ್ದಾರೆ. ಕೆಲವರು ವಾಹನದಲ್ಲಿ ಅವಿತುಕೊಂಡರೆ, ಕೆಲವರು ಅಲ್ಲಿಯೇ ಇದ್ದ ತಾಡಪತ್ರಿ ವಸ್ತ್ರಗಳನ್ನು ಹೊಚ್ಚಿಕೊಂಡು ಪಾರಾಗಿದ್ದಾರೆ.

ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಮುಗಿಸಿ ಅದೇ ದಾರಿಯಲ್ಲಿ ತಮ್ಮ ವಾಹನದಲ್ಲಿ ಸಾಗುತ್ತಿದಾಗ ಜೇನು ಕಡಿತಕ್ಕೊಳಗಾದ ಶಿಕ್ಷಕಿಯರನ್ನು ತಮ್ಮ ವಾಹನದಲ್ಲಿ ಹತ್ತಿರದ ಸಮುದಾಯ ಅರೋಗ್ಯ ಕೇಂದ್ರಕ್ಕೆ ಕರೆದೊಯ್ದು ಪ್ರಥಮ ಚಿಕಿತ್ಸೆ ನೀಡಿದರು.

---

## ಮೊಬೈಲ್ ಸ್ನ್ಯಾಚ್ ಮಾಡುತ್ತಿದ್ದ ಸಹೋದರರ ಬಂಧನ!




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಪುಟ್ಟೇನಹಳ್ಳಿ ಪೊಲೀಸರು ಕಾರ್ಯಾಚರಣೆ ನಡೆಸಿ ಮೊಬೈಲ್ ಕಳುವು ಮಾಡುತ್ತಿದ್ದ ಸಹೋದರರ ಬಂಧನ ಮಾಡಿದ್ದಾರೆ.

ಆನಂದ್, ಕಿರಣ್ ಬಂಧಿತ ಆರೋಪಿಗಳಾಗಿದ್ದಾರೆ. ರಸ್ತೆಯಲ್ಲಿ ಓಡಾಡುವವರನ್ನೇ ಟಾರ್ಗೆಟ್ ಮಾಡುತ್ತಿದ್ದ ಕಿಲಾಡಿಗಳು, ಬೈಕ್‌ನಲ್ಲಿ ಬಂದು ಮೊಬೈಲ್ ಕಸಿದುಕೊಂಡು ಪರಾರಿಯಾಗುತ್ತಿದ್ದರು.

ಪುಟ್ಟೇನಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಇದೇ ರೀತಿ ವ್ಯಕ್ತಿಯೊಬ್ಬರ ಮೊಬೈಲ್ ಎಗರಿಸಿದ್ದರು. ಕಡಿಮೆ ಬೆಲೆಗೆ ಮೊಬೈಲ್ ಮಾರಾಟ ಮಾಡಿ ಮೋಜು-ಮಸ್ತಿ ಮಾಡುತ್ತಿದ್ದರು. ಬಂಧಿತರಿಂದ ವಿವಿಧ ಕಂಪನಿಗಳ 3 ಲಕ್ಷ ಮೌಲ್ಯದ 20 ಮೊಬೈಲ್‌ಗಳನ್ನು ಸೀಜ್ ಮಾಡಲಾಗಿದೆ. ಪುಟ್ಟೇನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ಸಿಲಿಕಾನ್ ಸಿಟಿಯಲ್ಲಿ ಚಿರತೆ ಪ್ರತ್ಯಕ್ಷ: ಬೆಚ್ಚಿ ಬಿದ್ದ ಬೆಂಗಳೂರು ಮಂದಿ!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅರಣ್ಯ ಗಡಿಭಾಗದ ಗ್ರಾಮಗಳಿಗೆ ಲಗ್ಗೆ ಇಡ್ತಿದ್ದ ಚಿರತೆಗಳು, ಐಟಿ ಸಿಟಿ ಬೆಂಗಳೂರಿನಲ್ಲೂ ಪ್ರತ್ಯಕ್ಷವಾಗ್ತಿವೆ.

ಎಲೆಕ್ಟ್ರಾನಿಕ್ ಸಿಟಿ ವ್ಯಾಪ್ತಿಯಲ್ಲಿ ಚಿರತೆ ಪ್ರತ್ಯಕ್ಷವಾಗಿದೆ. ಎಲೆಕ್ಟ್ರಾನಿಕ್ಸ್ ಸಿಟಿಯ ಪಸ್ಟ್ ಪೇಸ್ ಟೋಲ್ ಪ್ಲಾಜಾ ಬಳಿ ಚಿರತೆ ಕಾಣಿಸಿಕೊಂಡಿದೆ. ಬೆಳಗ್ಗೆ 3 ಗಂಟೆ ಸಮಯದಲ್ಲಿ ಹೆದ್ದಾರಿಗೆ ಬಂದಿದೆ. ಪನಕ್ ಇಂಡಿಯಾ ಕಂಪನಿ ಭಾಗದಿಂದ ಎನ್.ಟಿ.ಟಿ.ಎಫ್ ಗ್ರೌಂಡ್ ಭಾಗಕ್ಕೆ ಚಿರತೆ ಹೋಗಿದೆ.

ಐಟಿ ಬಿಟಿ ಕಂಪನಿಗಳಿರುವ ಎಲೆಕ್ಟ್ರಾನಿಕ್ ಸಿಟಿಯ ಜಿಗಣಿ ಸುತ್ತಮುತ್ತ ಕಳೆದ ವಾರ ಚಿರತೆ ಕಾಣಿಸಿಕೊಂಡಿತ್ತು. ಈಗ ಐಟಿಬಿಟಿ ಹೆದ್ದಾರಿಗೆ ಚಿರತೆ ಎಂಟ್ರಿ ಕೊಟ್ಟಿದೆ. ಘಟನೆಯಿಂದ ಐಡಿಬಿಟಿ ಎಲೆಕ್ಟ್ರಾನಿಕ್ ಸಿಟಿ ಮಂದಿ ಆತಂಕದಲ್ಲಿದ್ದಾರೆ. ಲಕ್ಷಾಂತರ ಕಾರ್ಮಿಕರು ಕೆಲಸ ಮಾಡುವ ಐಟಿಬಿಟಿ ಹಬ್ ಇದಾಗಿದ್ದು, ಮಾಹಿತಿ ಆಧರಿಸಿ ಅರಣ್ಯ ಇಲಾಖೆ ಹಾಗೂ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

---

ಜಿಮ್ಸ್ ಕಟ್ಟಡ ಕಾಮಗಾರಿಗಳ ಶಿಲಾನ್ಯಾಸ, ಅತ್ಯಾಧುನಿಕ ಅಂಬ್ಯುಲೆನ್ಸ್ ಲೋಕಾರ್ಪಣೆ, ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ

# ಸಾರ್ವಜನಿಕರ ನಿರೀಕ್ಷೆ ಸಾಕಾರವಾಗಿದೆ



■ವಿಜಯಸಾಕ್ಷಿ ಸುದ್ದಿ, ಗದಗ

50 ಹಾಸಿಗೆಗಳ ತೀವ್ರ ನಿಗಾ ಘಟಕ ಗದಗ ಜಿಮ್ಸ್ ಆಸ್ಪತ್ರೆಗೆ ಸೇರ್ಪಡೆ ಆಗುವ ಮೂಲಕ ಈ ಭಾಗದ ಸಾರ್ವಜನಿಕರ ಬಹುದಿನಗಳ ನಿರೀಕ್ಷೆ ಸಾಕಾರವಾಗಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ ರವಿವಾರ 50 ಹಾಸಿಗೆಗಳ ತೀವ್ರ ನಿಗಾ ಘಟಕ, ಜಿಲ್ಲಾ ಸಮಗ್ರ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯ, ಕಟ್ಟಡ ಕಾಮಗಾರಿಗಳ ಶಿಲಾನ್ಯಾಸ ಸಮಾರಂಭ ಹಾಗೂ ಅತ್ಯಾಧುನಿಕ ಅಂಬ್ಯುಲೆನ್ಸ್ ಲೋಕಾರ್ಪಣೆ ಮತ್ತು ನೂತನ ಡಯಾಲಿಸಿಸ್ ಘಟಕ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ತೀವ್ರ ನಿಗಾ ಘಟಕ ಆರಂಭಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ ತುಂಬಾ ಸಹಕಾರ ನೀಡಿದ್ದಾರೆ. ಈ ಘಟಕ ಅಂದಾಜು 20 ಕೋಟಿ ರೂಗಳಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಮುಂದಿನ 15 ತಿಂಗಳೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಇಂಜಿನಿಯರ್ ಗಳಿಗೆ ಸೂಚಿಸಿದರು.

> ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಮಾತನಾಡಿ, ಗದಗ ಜಿಮ್ಸ್ ಆಸ್ಪತ್ರೆ ವೈದ್ಯರು ಹಾಗೂ ಸಿಬ್ಬಂದಿಗಳು ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲಿ ಜೀವದ ಹಂಗು ತೊರೆದು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತೀರಿ. ನಿಮ್ಮ ಸೇವೆಯನ್ನು ಮರೆಯಲಾಗದು. ಜಿಮ್ಸ್ ಆಸ್ಪತ್ರೆ ಈ ಮಟ್ಟದ ಅಭಿವೃದ್ಧಿ ಹೊಂದಲು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ್ ಅವರ ಕಾಳಜಿ, ಕಳಕಳಿ ಅಪಾರವಾಗಿದೆ ಎಂದರು.




ಈ ತೀವ್ರ ನಿಗಾ ಘಟಕದಿಂದ ಈ ಭಾಗದ ಹಾಗೂ ಅಕ್ಕಪಕ್ಕದ ಜಿಲ್ಲೆಗಳ ಕಿಡ್ನಿ ರೋಗಿಗಳಿಗೆ, ಹೃದಯ ಸಂಬಂಧಿ ರೋಗಿಗಳಿಗೆ, ಹಾವು ಕಡಿತ ಹಾಗೂ ರಸ್ತೆ ಅಪಘಾತ ಸಂದರ್ಭದಲ್ಲಿ ರೋಗಿಗಳ ಜೀವ ಸಂರಕ್ಷಣೆಗೆ ಅತ್ಯಂತ ಸಹಕಾರಿಯಾಗಲಿದೆ ಎಂದರು.

ಜಿಲ್ಲಾಸ್ಪತ್ರೆಯ ಸ್ವಚ್ಛತೆ ಕುರಿತು ಕಳೆದ ಆರು ತಿಂಗಳಿಂದ ಯಾವುದೇ ತರಹದ ಸಾರ್ವಜನಿಕರ ದೂರುಗಳು ಬಂದಿಲ್ಲ. ಇದಕ್ಕೆ ಇಲ್ಲಿನ ವಿದ್ಯಾರ್ಥಿಗಳ ಶ್ರಮದಾನ ಕಾರಣವಾಗಿದೆ ಎಂದು ತಿಳಿದುಬಂದಿದ್ದು, ಸಂತಸದ ವಿಷಯ. ದವಾಖಾನೆಗಳು ಸ್ವಚ್ಛವಾಗಿದ್ದರೆ ಅವುಗಳನ್ನು ದೇವಸ್ಥಾನಗಳು ಎಂದು ಜನಸಾಮಾನ್ಯರು ಭಾವಿಸುತ್ತಾರೆ. ಆ ತರಹದ ಮನೋಭಾವನೆ ಸ್ವಚ್ಛತೆಯಿಂದ ಮಾತ್ರವೇ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಅಸುಂಡಿ ಗ್ರಾಮ ಪಂಚಾಯತ್ ಅಧ್ಯಕ್ಷ ತಾಜುದ್ದೀನ ಹ.ಓಲೇಕಾರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಜಿ, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಪಿ.ಬೊಮ್ಮನಹಳ್ಳಿ, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಪ್ರಾಂಶುಪಾಲ ಡಾ. ರಾಜು ಜಿ. ಎಮ್, ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಅಧೀಕ್ಷಕ ಡಾ. ರೇಖಾ ಎಸ್.ಸೋನಾವನೆ, ಜಿಲ್ಲಾ ಶಸ್ತ್ರಚಿಕಿತ್ಸಕರು ಡಾ. ಬಿ.ಸಿ. ಕರಿಗೌಡರ, ಡಿಎಚ್‌ಓ ಡಾ. ಎಸ್.ಎಸ್. ನೀಲಗುಂದ, ವೈದ್ಯಕೀಯ ಶಿಕ್ಷಣ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಬೋಧಕ, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

---

## ದ್ವಿಚಕ್ರ ವಾಹನ ಕಳ್ಳತನ: ಆರೋಪಿಗಳು ಅರೆಸ್ಟ್!



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದ್ವಿಚಕ್ರ ವಾಹನಗಳನ್ನ ಕಳ್ಳತನ ಮಾಡ್ತಿದ್ದ ಆರೋಪಿಗಳನ್ನು ಬ್ಯಾಡರಹಳ್ಳಿ ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಮೊಹಮ್ಮದ್, ವಿಶ್ವನಾಥ್ ಬಂಧಿತ ಆರೋಪಿಗಳಾಗಿದ್ದು, ಬಂಧಿತರಿಂದ 9 ದ್ವಿಚಕ್ರ ವಾಹನ ಒಂದು ಆಟೋ ವಶಕ್ಕೆ ಪಡೆದಿದ್ದಾರೆ.

ಆರೋಪಿಗಳು ಬ್ಯಾಡರಹಳ್ಳಿ, ಜ್ಞಾನ ಭಾರತಿ, ಚಂದ್ರಾ ಲೇಔಟ್ ಠಾಣಾ ವ್ಯಾಪ್ತಿಯಲ್ಲಿ ಕೃತ್ಯ ಎಸಗಿದ್ದರು. ಬಂಧಿತರಿಂದ ಏಳು ಲಕ್ಷ ಮೌಲ್ಯದ ಹತ್ತು ದ್ವಿಚಕ್ರ ವಾಹನ ಜಪ್ತಿ ಮಾಡಲಾಗಿದ್ದು, ಈ ಘಟನೆ ಸಂಬಂಧ ಬ್ಯಾಡರಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

---

## ಕಾಂಗ್ರೆಸ್ ಪಕ್ಷಕ್ಕೆ ಷಡ್ಯಂತ್ರ ಮಾಡುವ ಅನಿವಾರ್ಯತೆ ಇಲ್ಲ: ಲಕ್ಷ್ಮೀ ಹೆಬ್ಬಾಳ್ಕರ್

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಕಾಂಗ್ರೆಸ್ ಪಕ್ಷಕ್ಕೆ ಷಡ್ಯಂತ್ರ ಮಾಡುವ ಅನಿವಾರ್ಯತೆ ಇಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಕಲಬುರಗಿ ವಿಮಾನ ನಿಲ್ದಾಣದಲ್ಲಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷಕ್ಕೆ ಷಡ್ಯಂತ್ರ ಮಾಡುವ ಅನಿವಾರ್ಯತೆ ಇಲ್ಲ. ಬಿಜೆಪಿ ರೀತಿ ಕಾಂಗ್ರೆಸ್ ಷಡ್ಯಂತ್ರ ಮಾಡಿದರೆ ಬಿಜೆಪಿಯವರಿಗೆ ಜೈಲುಗಳು ಸಾಕಾಗಲ್ಲ ಎಂದರು.

ಇನ್ನೂ ರಾಜಕಾರಣಿಗಳು ಅಂದ ಮೇಲೆ ನಮ್ಮನ್ನು ಜನ ಅನುಕರಣೆ ಮಾಡುತ್ತಾರೆ. ನಮ್ಮ ಜವಾಬ್ದಾರಿ ಏನು ಎಂಬುದನ್ನು ತಿಳಿದುಕೊಂಡು ಮಾತನಾಡಬೇಕು. ಹೆಣ್ಣು ಮಕ್ಕಳ ಬಗ್ಗೆ ನಾಲಗೆ ಬಿಗಿ ಹಿಡಿದುಕೊಂಡು ಮಾತನಾಡಬೇಕು ಎಂದು ಅವರು ವಾಗ್ದಾಳಿ ಮಾಡಿದರು.

---

## ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಅತಿಶಿ ಆಯ್ಕೆ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಿಎಂ ಸ್ಥಾನಕ್ಕೆ ದಿಢೀರನೆ ರಾಜೀನಾಮೆ ಘೋಷಿಸುವ ಮೂಲಕ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್, ಆಮ್ ಆದ್ಮಿ ಕಾರ್ಯಕರ್ತರಿಗೆ ಹಾಗೂ ತಮ್ಮ ಅಭಿಮಾನಿಗಳಿಗೆ ಶಾಕ್ ನೀಡಿದ್ದರು. ಇದರ ಬೆನ್ನಲ್ಲೇ ದೆಹಲಿ ನೂತನ ಸಿಎಂ ಸ್ಥಾನಕ್ಕೆ ಸಚಿವೆ ಅತಿಶಿ ಅವರ ಹೆಸರನ್ನು ಅರವಿಂದ್ ಕೇಜ್ರಿವಾಲ್ ಪ್ರಸ್ತಾಪಿಸಿದ್ದಾರೆ. ಅತಿಶಿ ಅವರು ದೆಹಲಿ ಎಎಪಿ ಶಾಸಕಾಂಗ ಪಕ್ಷದ ನಾಯಕಿಯಾಗಿ ಆಯ್ಕೆಯಾಗಿದ್ದಾರೆ ಎಂದು ಎಎಪಿ ಮೂಲಗಳು ತಿಳಿಸಿವೆ.

ಮಂಗಳವಾರ ಮಧ್ಯಾಹ್ನ ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಅವರನ್ನು ಭೇಟಿಯಾದ ನಂತರ ಅರವಿಂದ್ ಕೇಜ್ರಿವಾಲ್ ಅವರು ಉನ್ನತ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ, ದೆಹಲಿ ಸಚಿವ ಅತಿಶಿ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಮಂಗಳವಾರ ನಡೆದ ಆಮ್ ಆದ್ಮಿ ಪಕ್ಷದ (ಎಎಪಿ) ನಾಯಕರ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

## ಐಟಿಐ ವಿದ್ಯಾರ್ಥಿಗಳಿಗೆ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇದೇ ಸೆ.19 ಗುರುವಾರ ದಂದು ಬೆ.10.30 ಕ್ಕೆ ಕೊಪ್ಪಳದಲ್ಲಿ ಕ್ಯಾಂಪಸ್ ಸಂದರ್ಶ ಜರುಗಲಿದೆ.

ಈ ಸಂದರ್ಶನವು ನಗರದ S G GUNJ (APMC) ಕೊಪ್ಪಳದಲ್ಲಿರುವ ಸರ್ವೋದಯ ರೂರಲ್ ಕೈಗಾರಿಕಾ ತರಬೇತಿ ಸಂಸ್ಥೆ (ITI) ಯಲ್ಲಿ ಕೊಪ್ಪಳ ಜಿಲ್ಲೆಯ ಗಿಣಿಗೇರಾದ ಬೇವಿನಹಳ್ಳಿಯಲ್ಲಿರುವ ಮೆ: ಕಿರ್ಲೋಸ್ಕರ ಫೇರಸ್ಸ್ ಇಂಡಸ್ಟ್ರಿಸ್ ಲಿಮಿಟೆಡ್ ರವರಿಂದ ಶಿಶುಕ್ಷು ತರಬೇತಿ (ಅಪರೆಂಟಿಶಿಪ್ ಟ್ರೈನಿಂಗ್) ಗಾಗಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಂಡಿದೆ. ಸಂದರ್ಶನದಲ್ಲಿ ಕರ್ನಾಟಕ ರಾಜ್ಯದ್ಯಂತ ವಿವಿಧ ಸರಕಾರಿ/ ಅನುದಾನಿತ/ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಫಿಟ್ಟರ್, ಎಲೆಕ್ಟ್ರಿಷಿಯನ್, ಟರ್ನರ್, ಎಂ. ಎಂ. ವಿ, ಮೆಕ್ಯಾನಿಕ್ ಡೀಸೆಲ್, ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ ಮತ್ತು ವೆಲ್ಡರ್ ವೃತ್ತಿಗಳಲ್ಲಿ ಪಾಸಾದ ಅಭ್ಯರ್ಥಿಗಳು ಪಾಲ್ಗೊಳ್ಳಬಹುದಾಗಿದೆ.

ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು ಲಿಖಿತ ಪರೀಕ್ಷೆ ಹಾಗೂ ಸಂದರ್ಶನದ ಮುಖಾಂತರ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತಿದ್ದು. ಹಾಜರಾಗುವ ಅಭ್ಯರ್ಥಿಗಳು 18 ರಿಂದ 23 ವರ್ಷದವರಾಗಿರಬೇಕು.

ಕಾರಣ ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಎಸ್ಎಸ್ಎಲ್‌ಸಿ ಅಂಕಪಟ್ಟಿ, ಐಟಿಐ ಅಂಕಪಟ್ಟಿ, ಜಾತಿ ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡುಗಳ ಎರಡು ಜೆರಾಕ್ಸ್ ಪ್ರತಿಗಳು ಹಾಗೂ ಐದು ಪಾಸ್ಪೋರ್ಟ್ ಸೈಜ್ ಫೋಟೋಗಳೊಂದಿಗೆ ಹಾಜರಾಗಿ ಇದರ ಸದುಪಯೋಗ ಪಡೆದುಕೊಳ್ಳಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 8105369692 ಸಂಪರ್ಕಿಸಲು ಕೋರಲಾಗಿದೆ.

### ವಿಶ್ವಕರ್ಮ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಉಮೇಶಗೌಡ ಪಾಟೀಲ ಅಭಿಪ್ರಾಯ

## ವಿಶ್ವಕರ್ಮರ ಪಾತ್ರ ಮಹತ್ವದ್ದಾಗಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಿಶ್ವಕರ್ಮರು ತಮ್ಮ ಕುಲ ಕಸುಬನ್ನು ಆಧುನಿಕತೆಗೆ ತಕ್ಕಂತೆ ಬದಲಾವಣೆ ಮಾಡಿಕೊಂಡು ಸರಕಾರದಿಂದ ದೊರೆಯುವ ಸಾಲ ಸೌಲಭ್ಯದೊಂದಿಗೆ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ನರಗುಂದದ ಬಿಜೆಪಿ ಯುವ ಮುಖಂಡ ಉಮೇಶಗೌಡ ಪಾಟೀಲ ಸಲಹೆ ನೀಡಿದರು.

ಇಲ್ಲಿಯ ಕಾಳಿಕಾ ಕಮ್ಮಟೇಶ್ವರ ಸೇವಾ ಟ್ರಸ್ಟ್ ಕಮಿಟಿಯ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ದೇಶದ ಕಲೆ, ಸಂಸ್ಕೃತಿ, ಪರಂಪರೆಯ ಉಳಿವಿಗಾಗಿ ವಿಶ್ವಕರ್ಮರ ಪಾತ್ರ ಮಹತ್ವದಾಗಿದೆ. ಇದನ್ನು ಅರಿತ ಮೋದಿಯವರ ಕೇಂದ್ರ ಸರಕಾರ ದೇಶದ 18 ಕುಲಕಸುಬುದಾರ ವಿಶ್ವಕರ್ಮರ ಆರ್ಥಿಕ ಬೆಳವಣಿಗೆಗೆ ವಿಶ್ವಕರ್ಮ ಯೋಜನೆಯನ್ನು ಜಾರಿಗೆ ತಂದಿದ್ದಾರೆ. ವಿಶ್ವಕರ್ಮರು ಬಡವ-ಬಲ್ಲಿದ, ದೀನ-ದಲಿತರೆನ್ನದೇ ಎಲ್ಲ ಸಮುದಾಯದವರಿಗೂ ತಮ್ಮ ಕುಲ ಕಸುಬಿನ ಉಪಕರಣವನ್ನು ಮಾಡಿಕೊಡಲು ಹಿಂಜರಿಯುವುದಿಲ್ಲ. ನಿಜಾರ್ಥದಲ್ಲಿ ಅವರು ಭಾವೈಕ್ಯತೆಯುಳ್ಳವರಾಗಿದ್ದಾರೆ ಎಂದರು.



ಗ್ರಾ.ಪಂ ಅಧ್ಯಕ್ಷರು ಧ್ವಜಾರೋಹಣ ನೆರವೇರಿಸಿ ಮಾತನಾಡಿ, ವಿಶ್ವಕರ್ಮರು ಇಲ್ಲದ ಗ್ರಾಮ ಬಹುತೇಕ ನಮ್ಮ ದೇಶದಲ್ಲಿಯೇ ಇಲ್ಲ. ಎಲ್ಲ ಸಮುದಾಯವನ್ನು ಸಮಾನವಾಗಿ ಕಾಣುವ ಅವರಿಗೆ ರಾಜ್ಯ ಮತ್ತು ಕೇಂದ್ರ ಸರಕಾರಗಳು ಯೋಜನೆಯನ್ನು ಜಾರಿಗೆ ತಂದರೂ ಸಹ ಫಲಾನುಭವಿಗಳಿಗೆ ತಲುಪುತ್ತಿಲ್ಲ. ಈ ಬಗ್ಗೆ ಯುವಕರು ಗಮನ ಹರಿಸಬೇಕು. ಕಲ್ಯಾಣ ಮಂಟಪ ನಿರ್ಮಾಣಕ್ಕೆ ನಿವೇಶನ ಬೇಡಿಕೆ ಇಟ್ಟಿದ್ದು, ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಸಾನ್ನಿಧ್ಯ ವಹಿಸಿದ್ದ ಅಲ್ಲಪ್ರಭುದೇವರ ಮಠದ ಸಿದ್ಧಲಿಂಗೇಶ್ವರ ಶ್ರೀಗಳು, ನಿವೃತ್ತ ಶಿಕ್ಷಕ ವಿ.ಆಯ್. ಬಡಿಗೇರ ಮಾತನಾಡಿದರು. ಸೇವೆ ಮಾಡಿದ ಮಹನೀಯರನ್ನು ಸನ್ಮಾನಿಸಲಾಯಿತು. ಗ್ರಾಮದ ಪ್ರಮುಖ ಬೀದಿಯಲ್ಲಿ ವಿಶ್ವಕರ್ಮರ ಭಾವಚಿತ್ರ ಮೆರವಣಿಗೆ ಜರುಗಿತು. ಈರಣ್ಣ ಕಂಚಗಾರ ಅಧ್ಯಕ್ಷತೆ ವಹಿಸಿದ್ದರು. ಮಲ್ಲಿಕಾರ್ಜುನ ಬಡಿಗೇರ ಸಂಗಡಿಗರು ಪ್ರಾರ್ಥಿಸಿದರು. ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಬಿ.ಜೆ.ಪಿ ಮುಖಂಡರಾದ ವಸಂತ ಮೇಟಿ, ಪ್ರದೀಪ ನವಲಗುಂದ, ಸದಸ್ಯರಾದ ರುದ್ರಪ್ಪ ಮುಸ್ಕಿನಭಾವಿ, ಬಸವರಾಜ ಯಲಿಶಿರುಂದ, ವಿರೂಪಾಕ್ಷಪ್ಪ ಬೆಟಗೇರಿ, ಅಮೀನಾ ಹುಬ್ಬಳ್ಳಿ, ರಜೀಯಾಬೇಗಂ ತಹಸೀಲ್ದಾರ, ಫಕ್ಕೀರಮ್ಮ ಬೇಲೇರಿ, ಮಾಜಿ ಸದಸ್ಯರಾದ ಕುಬೇರಪ್ಪ ಕಮ್ಮಾರ, ಸುಮಾ ಬಡಿಗೇರ ವೇದಿಕೆಯಲ್ಲಿದ್ದರು. ಕಾರ್ಯದರ್ಶಿ ದೇವೆಂದ್ರಪ್ಪ ಬಡಿಗೇರ ಸ್ವಾಗತಿಸಿದರು. ಪ್ರಕಾಶ ಅರಹುಣಶಿ ನಿರೂಪಿಸಿದರು. ಗೋವಿಂದಪ್ಪ ಬಡಿಗೇರ ವಂದಿಸಿದರು.

ನಿವೃತ್ತ ಶಿಕ್ಷಕ ಅಶೋಕ ಬೂದಿಹಾಳ ಮಾತನಾಡಿ, ತಮ್ಮ ಜೀವನೋಪಾಯಕ್ಕಾಗಿ ಕಬ್ಬಿಣ, ಕಲ್ಲು ಕಟ್ಟಿಗೆ, ಮಣ್ಣಿನಲ್ಲಿ ತಮ್ಮ ಕೌಶಲ್ಯದಿಂದ ಹಲವಾರು ಕಲಾಕೃತಿಗಳನ್ನು ತಯಾರಿಸುತ್ತ ಶ್ರಮಜೀವಿಗಳಾಗಿರುವ ವಿಶ್ವಕರ್ಮರು ಸಮಾಜದಲ್ಲಿ ಉತ್ತಮ ಸ್ನೇಹ ಸಂಭಂದವನ್ನು ಇಟ್ಟುಕೊಂಡಿದ್ದಾರೆ. ಇವರು ಆರ್ಥಿಕವಾಗಿ ಹಿಂದುಳಿದವರಿದ್ದು, ಇಲ್ಲಿಯ 70 ಕುಟುಂಬಗಳಿಗೆ ಅವರು ತಯಾರಿಸಿರುವ ಉಪಕರಣಗಳ ಸಂರಕ್ಷಣೆಗಾಗಿ ಸರಕಾರ ಬೃಹತ್ ಶೆಡ್ ನಿರ್ಮಾಣ ಮಾಡಬೇಕಿದೆ ಎಂದರು.

## ಶಿವಾನಂದರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿಜಯನಗರ ಬಡಾವಣೆಯಲ್ಲಿರುವ ವಿಶ್ವಕರ್ಮ ಭವನದಲ್ಲಿ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘ ಹಾಗೂ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘಗಳ 6ನೇ ವರ್ಷದ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಅಡಳಿತಾಧಿಕಾರಿ ಪ್ರೊ. ಶಿವಾನಂದ ಪಟ್ಟಣಶೆಟ್ಟಿ ಅವರನ್ನು ಸನ್ಮಾನಿಸಲಾಯಿತು.

ಗಿಣೀಗೇರಾ ಶ್ರೀಮತ್ ಆನೆಗೊಂದಿ ಮಹಾಸಂಸ್ಥಾನ ಸರಸ್ವತಿ ಪೀಠದ ಶ್ರೀ ಅಭಿನವ ಶ್ರೀಕಂಠಸ್ವಾಮೀಜಿ, ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ, ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಿಂದಮ್ಮ ವಡ್ಡಟ್ಟಿ, ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷರಾದ ಎ.ಎನ್. ಬಡಿಗೇರ, ರೋಣ ವಲಯ ಅಬಕಾರಿ ನಿರೀಕ್ಷಕ ಗಂಗಾಧರ ಬಡಿಗೇರ, ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ಸೇರಿದಂತೆ ಗಣ್ಯರು ಇದ್ದರು.

## ನಮ್ಮ ದೃಷ್ಟಿಯಂತೆ ಸೃಷ್ಟಿ ಕಾಣುವುದು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಭೂಮಂಡಲದಲ್ಲಿ ನಮಗಾಗಿ ಜಲ, ನೆಲ, ಭೂಮಿ, ಗಾಳಿ ಸಂಪತ್ತನ್ನು ದೇವರು ನೀಡಿದ್ದಾನೆ. ಸಂತರು, ಶರಣರು ತಮ್ಮ ಆಗಾದ ದೃಷ್ಟಿಕೋನಗಳಿಂದ ಈ ಸೃಷ್ಟಿಯಲ್ಲಿ ಬಾಳಿ ಬೆಳಕಾದವರು. ಅಂತವರು ಹಾಕಿಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗುವುದರಿಂದ ಈ ಸೃಷ್ಟಿಯಲ್ಲಿ ಸಂತೋಷದಿಂದ ಬಾಳಬೇಕಾಗಿದೆ. ನಮ್ಮ ದೃಷ್ಟಿಯಂತೆ ಸೃಷ್ಟಿ ಕಾಣುವುದು ಎಂದು ಕೊಪ್ಪಳ ಗವಿಸಿದ್ದೇಶ್ವರಮಠದ ಅಭಿನವ ಗವಿಸಿದ್ದೇಶ್ವರ ಸ್ವಾಮಿಜಿ ಹೇಳಿದರು.

ಅವರು ಪಟ್ಟಣದ ಬಸವೇಶ್ವರ ನಗರದ ನೂತನ ಮಾರುತಿ ದೇವರ ಮೂರ್ತಿ ಪ್ರತಿಷ್ಠಾಪನೆ ಹಾಗೂ ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.



ಮುಳಗುಂದ ಗವಿ ಮಠದ ಮಲ್ಲಿಕಾರ್ಜುನ ಮಾಹಸ್ವಾಮೀಜಿ ಮಾತನಾಡಿ, ನಾವು ಪ್ರಪಂಚವನ್ನು ಒಳ್ಳೆಯ ದೃಷ್ಟಿಕೋನದಿಂದ ಕಾಣಬೇಕು. ಪ್ರತಿ ವಸ್ತು, ವ್ಯಕ್ತಿ, ವಿಷಯ, ವಿಚಾರ ಜೀವನದಲ್ಲಿ ಎದುರಾಗುವ ಪರಿಸ್ಥಿತಿಗಳನ್ನು ಸಹ ನಾವೆಲ್ಲರೂ ಒಳ್ಳೆಯ ದೃಷ್ಟಿಯಿಂದ ಕಾಣಬೇಕು ಎಂದರು.

ನೀಲಗುಂದ ಗುದ್ನೇಶ್ವರ ಮಠದ ಪ್ರಭುಲಿಂಗ ದೇವರು ಮಾತನಾಡಿದರು. ಅಧ್ಯಕ್ಷತೆಯನ್ನು ಗುರಣ್ಣಾ ನೀಲಗುಂದ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಯುವ ಮುಖಂಡ ಶರಣು ಪಾಟೀಲ್, ಗಣ್ಯರಾದ ಶಿವಣ್ಣಾ ನೀಲಗುಂದ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಹನುಮಂತಪ್ಪ ಬೀಡನಾಳ, ಕೃಷ್ಣಾ ಕುಷ್ಠಗಿ, ಬಿ.ಶರಣಪ್ಪ, ರಾಮಣ್ಣಾ ಕಮಾಜಿ, ಬಿ.ವಿ. ಸುಂಕಾಪೂರ, ಎಸ್.ಸಿ. ಬಡ್ನಿ, ಶಿವಣ್ಣಾ ಚರಾರಿ, ಮಹೇಶ ದೇಸಾಯಿ, ಪರಶುರಾಮ ವಂಟಕರ್, ಅಶೋಕ ಸೋನಗೋಜಿ, ಕೆ.ಎಲ್. ಕರಿಗೌಡ್ರ, ಸಂಜಯ ನೀಲಗುಂದ, ಹೋನ್ನಪ್ಪ ನೀಲಗುಂದ, ಶಿದ್ದಪ್ಪ ಶಿರಹಟ್ಟಿ, ವೇಂಕಟೇಶ, ಇಮ್ಮಣ್ಣಾ ಶೇಖ, ದ್ಯಾಮಣ್ಣಾ ನೀಲಗುಂದ, ನಾಗರಾಜ ದೇಶಪಾಂಡೆ, ಅಶೋಕ ಹುಣಶಿಮರದ, ಲಿಂಗರಾಜ ಬಟ್ಟೂರ, ಬಸವರಾಜ ಹಾರೋಗೇರಿ, ಜೈ ಮಾರುತಿ ಸಮುದಾಯ ಭವನ ಟ್ರಸ್ಟ್ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಇದ್ದರು.

### ವಿಶ್ವಕರ್ಮ ಸಮಾಜದ ವತಿಯಿಂದ ಸ್ವಯಂ ಪ್ರೇರಿತ ರಕ್ತದಾನ, ರಕ್ತ ತಪಾಸಣೆ ಶಿಬಿರ

## ಒಬ್ಬರ ರಕ್ತ ಐದು ಜೀವಗಳಿಗೆ ವರದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ರಕ್ತದಾನ ಮಾಡುವುದರಿಂದ ಹಲವಾರು ಜೀವಗಳನ್ನು ಉಳಿಸಬಹುದು. ರಕ್ತದ ಕಣದಲ್ಲಿ ಐದು ವಿಧಗಳಾಗಿ ವಿಂಗಡಿಸಿ ಅಗತ್ಯವಿರುವ ಐದು ಜನರಿಗೆ ನೀಡಲಾಗುವುದು. ಹೀಗಾಗಿ, ಒಬ್ಬರ ರಕ್ತ ಐದು ಜೀವಗಳಿಗೆ ವರದಾನ. ಕಾರಣ ಅರ್ಹರೆಲ್ಲರೂ ತಪ್ಪದೇ ರಕ್ತದಾನ ಮಾಡಬೇಕು. ರಕ್ತದಾನ ಜೀವದಾನ ಇದ್ದಂತೆ ಎಂದು ಶಿಗ್ಗಾಂವಿಯ ನಿವೃತ್ತ ಸ್ತ್ರೀರೋಗ ತಜ್ಞರಾದ ಡಾ. ಪದ್ಮಾವತಿ ಪತ್ತಾರ ಹೇಳಿದರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿ ರುವ ವಿಶ್ವಕರ್ಮ ಭವನದಲ್ಲಿ 'ವಿಶ್ವಕರ್ಮ ಮಹೋತ್ಸವ' ಅಂಗವಾಗಿ ಗದಗ ಜಿಲ್ಲಾ ವಿಶ್ವಕರ್ಮ ಸಮಾಜದ ವತಿಯಿಂದ ಆಯೋಜಿಸಿದ್ದ ಸ್ವಯಂ ಪ್ರೇರಿತ ರಕ್ತದಾನ ಹಾಗೂ ರಕ್ತ ತಪಾಸಣೆ ಶಿಬಿರ ಮತ್ತು ವಿದ್ಯಾರ್ಥಿಗಳಿಗಾಗಿ ವಿವಿಧ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಅಧ್ಯಕ್ಷತೆ ವಹಿಸಿದ್ದ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಂಸ್ಥಾಪಕ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ ಮಾತನಾಡಿ, ಮಹಾತ್ಮರ, ಶರಣರ, ಸಾಧು ಸಂತರ ಜಯಂತಿ, ಮಹೋತ್ಸವಗಳು ಭಾಷಣ, ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಮಾತ್ರ ಮೀಸಲಾಗದೇ, ಜನಪರ, ಸಮುದಾಯ ಪರವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಾಗ ಮಾತ್ರ ಅ ಕಾರ್ಯಗಳಿಗೆ ನೈಜ ಅರ್ಥಬರಲು ಸಾಧ್ಯ. ಈ ನಿಟ್ಟಿನಲ್ಲಿ ರಕ್ತದಾನ, ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆ ಆಯೋಜಿಸಲಾಗಿದೆ. ವಿಶ್ವಕರ್ಮ ಸಮುದಾಯದ ಎಲ್ಲ ಬಂಧುಗಳು ಇಂತಹ ರಚನಾತ್ಮಕ ಕಾರ್ಯಗಳಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದರು.

ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಗೌರವ ಅಧ್ಯಕ್ಷರಾದ ಎ.ಎನ್. ಬಡಿಗೇರ, ನಿರ್ದೇಶಕರಾದ ಡಾ. ಗಿರೀಶ ಬಡಿಗೇರ, ಯುವ ಪರಿಷತ್ ಅಧ್ಯಕ್ಷ ಮಹೇಶ ಕಮ್ಮಾರ, ರಿಂದಮ್ಮ ವಡ್ಡಟ್ಟಿ ಉಪಸ್ಥಿತರಿದ್ದರು. ಸಾಹಿತ್ಯ ಪತ್ತಾರ ಪ್ರಾರ್ಥಿಸಿದರು. ಸುಮಂಗಲಾ ಪತ್ತಾರ ಸ್ವಾಗತಿಸದರು. ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಕಮ್ಮಾರ ನಿರೂಪಿಸಿದರೆ, ಡಾ. ಗಿರೀಶ ಬಡಿಗೇರ ವಂದಿಸಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಡಿಜಿಎಂ ಆಯುರ್ವೇದ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಡಾ. ಉಮೇಶ ಪುರದ ಮಾತನಾಡಿ, ಆಧುನಿಕ ತಂತ್ರಜ್ಞಾನ ಬಹಳ ಉತ್ತುಂಗದಲ್ಲಿದೆ. ಮನುಷ್ಯ ಎಲ್ಲವನ್ನು ಸಂಶೋಧನೆ ಮಾಡಿದ್ದರೂ, ರಕ್ತದ ಉತ್ಪಾದನೆ ಅಸಾಧ್ಯ. ಹೀಗಾಗಿ, ಎಲ್ಲರೂ ರಕ್ತದಾನ ಮಾಡಬೇಕು. ಆ ಮೂಲಕ ಜೀವ ಉಳಿಸಿದ ಪುಣ್ಯ ಪ್ರಾಪ್ತವಾಗುವುದು ಎಂದರು.




ಬೆಟಗೇರಿ ಈದಗಾ ಕಮಿಟಿ ವತಿಯಿಂದ ಸೋಮವಾರ ನಡೆದ ಪ್ರವಾದಿ ಮುಹಮ್ಮದ ಪೈಗಂಬರ್ ಜಯಂತಿಯಂದು ಮುಸ್ಲಿಂ ಧರ್ಮಿಯರ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಸಚಿವ ಡಾ. ಎಚ್.ಕೆ. ಪಾಟೀಲ ಅವರನ್ನು ಈದಗಾ ಕಮಿಟಿಯ ಅಧ್ಯಕ್ಷ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷರಾದ ಪೀರಸಾಬ ಕೌತಾಳ ಅವರು ಸನ್ಮಾನಿಸಿ, ಗೌರವಿಸಿದರು.



ಬೆಟಗೇರಿ ಈದಗಾ ಕಮಿಟಿಯ ಅಧ್ಯಕ್ಷ ಪೀರಸಾಬ ಕೌತಾಳ ನೇತೃತ್ವದಲ್ಲಿ ಸೋಮವಾರ ಪ್ರವಾದಿ ಮುಹಮ್ಮದ ಪೈಗಂಬರ್ ಜಯಂತಿಯಂದು ನಡೆದ ಮುಸ್ಲಿಂ ಧರ್ಮಿಯರ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ 22 ನವ ಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿರಿಸಿದರು.

### ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘದ ಸರ್ವ ಸಾಧಾರಣ ಸಭೆ

## ವಿಶ್ವಕರ್ಮ ಸಮಾಜದ ಸಂಘಟನೆ ಮಾದರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ವ ಜನಾಂಗದೊಂದಿಗೆ ಸಣ್ಣ ಪುಟ್ಟ ಸಮಾಜಗಳು ಸಂಘಟಿತರಾದರೆ ಮಾತ್ರ ಒಂದು ದೇಶ ಸರ್ವಾಂಗೀಣವಾಗಿ ಸಂಘಟಿತವಾಗಲು ಸಾಧ್ಯ. ಚಿಕ್ಕ ಸಮಾಜವಾದರೂ ವಿಶ್ವಕರ್ಮ ಸಮಾಜ ಗದಗ ಜಿಲ್ಲೆಯಲ್ಲಿ ರಾಜಗೋಪಾಲ ಕಡ್ಲಿಕೊಪ್ಪ ಅವರ ನೇತೃತ್ವದಲ್ಲಿ ಮಾದರಿಯಾಗಿ ಸಂಘಟಿತವಾಗಿದೆ. ಬೇರೆ ಸಮಾಜಗಳಿಗೆ ಇವರು ಕೈಗೊಂಡ ಕಾರ್ಯ ಯೋಜನೆಗಳು ಅನುಕರಣೀಯವಾಗಿವೆ ಎಂದು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಅಡಳಿತಾಧಿಕಾರಿ ಪ್ರೊ. ಶಿವಾನಂದ ಪಟ್ಟಣಶೆಟ್ಟಿ ಹೇಳಿದರು.

ಅವರು ನಗರದ ವಿಜಯನಗರ ಬಡಾವಣೆಯಲ್ಲಿರುವ ವಿಶ್ವಕರ್ಮ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವಕರ್ಮ ನೌಕರರ ಪತ್ತಿನ ಸಹಕಾರಿ ಸಂಘ ಹಾಗೂ ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘಗಳ 6ನೇ ವರ್ಷದ ವಾರ್ಷಿಕ ಸರ್ವ ಸಾಧಾರಣ ಸಭೆ ಉದ್ಘಾಟಿಸಿ ಮಾತನಾಡಿದರು.




ಗಿಣೀಗೇರಾ ಶ್ರೀಮತ್ ಆನೆಗೊಂದಿ ಮಹಾಸಂಸ್ಥಾನ ಸರಸ್ವತಿ ಪೀಠದ ಶ್ರೀ ಅಭಿನವ ಶ್ರೀಕಂಠಸ್ವಾಮೀಜಿ ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ವಿಶ್ವಕರ್ಮ ಮಹಿಳಾ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷರಾದ ರಿಂದಮ್ಮ ವಡ್ಡಟ್ಟಿ ಅಧ್ಯಕ್ಷತೆ ವಹಿಸಿದ್ದರು. ಸಮಾಜದ ಪ್ರಮುಖರಾದ ಎ.ಎನ್. ಬಡಿಗೇರ, ಗಂಗಾಧರ ಬಡಿಗೇರ, ಮುತ್ತಣ್ಣ ಆರ್.ಬಡಿಗೇರ, ದೇವೇಂದ್ರಪ್ಪ ಬಡಿಗೇರ, ವೀರಣ್ಣ ಹಲವಾಗಲಿ, ಶ್ರೀಧರ ಕೊಣ್ಣೂರ, ರವೀಂದ್ರ ಕಮ್ಮಾರ, ಎಸ್. ಎಂ. ಕದಡಿ, ಪುಷ್ಪಾ ವಿಶ್ವಜ್ಞ, ವಾಣಿಶ್ರೀ ಕಡ್ಲಿಕೊಪ್ಪ, ಲಕ್ಷ್ಮೀ ಆರ್.ಕಡ್ಲಿಕೊಪ್ಪ, ಪದ್ಮಾವತಿ ಎಚ್. ಬಡಿಗೇರ, ಅನ್ನಪೂರ್ಣ ಬಡಿಗೇರ, ಪ್ರೇಮಾ ಗ.ಬಡಿಗೇರ, ಶಶಿಕಲಾ ಪಂಚಾಳ, ಜಯಶ್ರೀ ಬಡಿಗೇರ, ಅರುಂಧತಿ ಜಿ.ಕೆ., ಸುವರ್ಣ ಬಡಿಗೇರ, ವಿಜಯಲಕ್ಷ್ಮೀ ಹಡಗಲಿ, ಪ್ರತಿಮಾ ಮಹಾಪುರುಷ, ಜ್ಯೋತಿ ಬಡಿಗೇರ, ಶಶಿಧರ ಕಿತ್ತಲಿ, ವಿದ್ಯಾ ಬಡಿಗೇರ, ನೇತ್ರಾವತಿ ಪತ್ತಾರ, ರಾಘವೇಂದ್ರ ಇಚ್ಚಂಗಿ, ಮೋಹನ ಸುತಾರ, ಶ್ರೀಕಾಂತ ದೊಡಮನಿ, ಡಾ. ಗಿರೀಶ ಬಡಿಗೇರ, ವಿನಾಯಕ ಬಡಿಗೇರ, ದೇವೇಂದ್ರಪ್ಪ ಬಡಿಗೇರ, ಲಕ್ಷ್ಮಣ ಶಿರೂರ, ಚಿದಾನಂದ ಕಮ್ಮಾರ, ವಿಶ್ವನಾಥ ಸರಾಫ, ಆನಂದ ಕಮ್ಮಾರ, ಶಂಕ್ರಾಚಾರ್ಯ ಕಂಚಗಾರ, ಚಂದ್ರಶೇಖರ ಶಿಂಗಟಾಲೂರ, ಸುಮಂಗಲಾ ಪತ್ತಾರ, ಇಂದಿರಾ ಬಡಿಗೇರ, ವ್ಯವಸ್ಥಾಪಕ ಮಧುಸೂದನ ವಿಶ್ವಕರ್ಮ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಸಾಹಿತ್ಯ ಪತ್ತಾರ ಪ್ರಾರ್ಥಿಸಿದರು. ಸುಮಂಗಲಾ ಪತ್ತಾರ ಸ್ವಾಗತಿಸದರು. ವಿಶ್ವನಾಥ ಕಮ್ಮಾರ ನಿರೂಪಿಸಿದರ. ಡಾ. ಗಿರೀಶ ಬಡಿಗೇರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ರಾಜಗೋಪಾಲ ಡಿ.ಕಡ್ಲಿಕೊಪ್ಪ ಮಾತನಾಡಿ, ನೌಕರರ ಪತ್ತಿನ ಹಾಗೂ ಮಹಿಳಾ ಪತ್ತಿನ ಸಹಕಾರಿ ಸಂಘಗಳು ಸರ್ವ ಸದಸ್ಯರ ಸಹಕಾರದಿಂದ ಏರುಗತಿಯಲ್ಲಿ ಸಾಗಿವೆ. ಇನ್ನಷ್ಟು ಸಮಾಜ ಬಾಂಧವರು ಠೇವಣಿ ಹಾಗೂ ಸದಸ್ಯತ್ವ ಹೊಂದುವ ಮೂಲಕ ಸಂಘಟನೆಯಲ್ಲಿ ಭಾಗಿಗಳಾಗಬೇಕು ಎಂದರು.

# ಧರ್ಮ ಮಾರ್ಗದಲ್ಲಿ ಸಾಗುವ ಮನಸ್ಸು ಮಾಡಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಸವಣೂರು ತಾಲೂಕ ಹೂವಿನ ಶಿಗ್ಗಿ ಗ್ರಾಮದ ಹಿಂದೂ ಮಹಾಸಭಾ ಗಣಪತಿ ವಿಸರ್ಜನಾ ಕಾರ್ಯಕ್ರಮದ ಅಂಗವಾಗಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳವರ ನಾಣ್ಯಗಳಿಂದ ತುಲಾಭಾರ ಕಾರ್ಯಕ್ರಮವನ್ನು ಸಮಿತಿಯವರು ಹಾಗೂ ಭಕ್ತರು ನೆರವೇರಿಸಿದರು.

ನೇತೃತ್ವ ವಹಿಸಿದ್ದ ಜಲ್ಲಾಪೂರದ ಡಾ.ಗುರು ಮಹಾಂತಯ್ಯ ಶಾಸ್ತ್ರೀಗಳು ಮಾತನಾಡಿ, ಭಾರತ ದೇಶ ಸಂಪ್ರದಾಯಬದ್ಧವಾದ ದೇಶವಾಗಿದ್ದು, ಮಠಮಾನ್ಯಗಳಿಗೆ ಗೌರವ ನೀಡುವ ಸಂಪ್ರದಾಯ ನಮ್ಮಲ್ಲಿದೆ. ಆದರೆ ಯುವಕರು ಧರ್ಮ ಮಾರ್ಗದಲ್ಲಿ ತೊಡಗಿಸಿಕೊಳ್ಳುವ ನಿಟ್ಟಿನಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ನುಡಿದರು.

ಹೂವಿನಶಿಗ್ಲಿಯ ಇನ್ನೊಬ್ಬ ಪ್ರವಚನಕಾರ ಗದಗ ಬೂದಿಹಾಳದ ಗವಿಸಿದ್ದೇಶ್ವರ ಶಾಸ್ತ್ರಿಗಳು ಮಾತನಾಡಿ, ಹೆಣ್ಣು-ಹೊನ್ನು-ಮಣ್ಣುಗಳಿಗೆ ಬೆಲೆ ಕೊಡದೆ ಗುರುಗಳಿಗೆ ಗೌರವ ಕೊಡಬೇಕು. ಗುರು ಮುಖೇನ ಮಾಡಿದ ಕಾರ್ಯಗಳು ಸಫಲವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಾನಗಲ್ಲ ಗುರು ಕುಮಾರೇಶ್ವರ 157ನೇ ಜನ್ಮದಿನೋತ್ಸವದ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವುದರ ಮೂಲಕ ಅವರ ಕಾರ್ಯ ಸಾಧನೆಯನ್ನು ಸ್ಮರಿಸಲಾಯಿತು. ತುಲಾಭಾರದ ತಕ್ಕಡಿಯಲ್ಲಿ ಕುಳಿತು ಆಶೀರ್ವಚನ ನೀಡಿದ ಚನ್ನವೀರ ಶ್ರೀಗಳು, ಹಿಂದೂ ಮಹಾಸಭಾ ಗಣಪತಿಯ ಯುವಕರು ನಮ್ಮ ಗುರುಕುಲ ಶಿಕ್ಷಣ ಸಂಸ್ಥೆಯ ಅನಾಥ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಈ ತುಲಾಭಾರ ನಡೆಸಿದ್ದು ನಮಗೆ ತುಂಬಾ ತುಂಬಾ ಸಂತೋಷ ನೀಡಿದೆ. ಅಧ್ಯಾತ್ಮದ ಹಾದಿ ತುಳಿದರೆ ಜೀವನ ಪಾವನ ಎಂದು ನುಡಿದರು.

ಸಿದ್ದಯ್ಯ ಹಿರೇಮಠ್ ಹಾಗೂ ಬಾಲಾಜಿ ಕಟ್ಟಿ ಸಂಗಾವಿ ಅವರಿಂದ ಸಂಗೀತ ಸೇವೆ ನಡೆಯಿತು. ಮಹಾದೇವ ಬಿಸ್ಟಣ್ಣವರ್ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕ ಮಾತನಾಡಿ ನಿರೂಪಿಸಿ ವಂದಿಸಿದರು.

### ರೋಟರಿ ಕ್ಲಬ್ ವತಿಯಿಂದ ಆಯೋಜಿಸಿದ್ದ ನೇತ್ರ ತಪಾಸಣಾ ಶಿಬಿರದಲ್ಲಿ ಡಾ. ಮುರಳಿ ಕೃಷ್ಣನ್

# ಕಣ್ಣುಗಳ ರಕ್ಷಣೆಗೆ ಗಮನ ನೀಡಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಣ್ಣುಗಳು ಮನುಷ್ಯನ ದೇಹದ ಮಹತ್ವದ ಅಂಗ. ಕಣ್ಣುಗಳ ಮೂಲಕವೇ ನೀವು ನೋಡುತ್ತೀರಿ, ಓದುತ್ತೀರಿ, ಈ ಜಗತ್ತನ್ನು ನೋಡಲು ನಿಮಗೆ ಕಣ್ಣುಗಳ ಅವಶ್ಯಕತೆ ಇದ್ದೇ ಇದೆ. ಆದ್ದರಿಂದ ಕಣ್ಣುಗಳ ರಕ್ಷಣೆಯ ಕಡೆಗೆ ಹೆಚ್ಚಿನ ಗಮನ ನೀಡಬೇಕು ಎಂದು ಗದಗ ರೋಟರಿ ಕ್ಲಬ್‌ನ ಚಾರ್ಟರ್ ಪ್ರೆಸಿಡೆಂಟ್ ಡಾ. ಮುರಳಿ ಕೃಷ್ಣನ್ ಹೇಳಿದರು.

ಸಮೀಪದ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯಲ್ಲಿ ರೋಟರಿ ಕ್ಲಬ್ ವತಿಯಿಂದ ಆಯೋಜಿಸಲಾಗಿದ್ದ ವಿದ್ಯಾರ್ಥಿಗಳ ಕಣ್ಣು ತಪಾಸಣೆ ಶಿಬಿರದಲ್ಲಿ ಅವರು ಮಾತನಾಡಿದರು.

ಯಾರಿಗೆ ಕನ್ನಡಕಗಳ ಅವಶ್ಯಕತೆ ಇದೆಯೋ ಅವರಿಗೆ ರೋಟರಿ ಸಂಸ್ಥೆಯ ವತಿಯಿಂದ ಉಚಿತ ಕನ್ನಡಕಗಳನ್ನು ನೀಡಲಾಗುವುದು. ರೋಟರಿ ಸಂಸ್ಥೆ ಸಾರ್ವಜನಿಕರ ಸೇವೆ ಮಾಡುವಲ್ಲಿ ಎಂದಿಗೂ ಮುಂದಿದೆ. ಸಾಧಾರಣ ತೊಂದರೆ ಇರುವವರಿಗೆ ಮಾತ್ರ ಮತ್ತು ಕಣ್ಣಿನಲ್ಲಿ ಹಾಕಿಕೊಳ್ಳಲು ಡ್ರಾಪ್ಸ್‌ಗಳನ್ನು ನೀಡಲಾಗುತ್ತಿದೆ. ಇವುಗಳನ್ನು ಸರಿಯಾಗಿ ತೆಗೆದುಕೊಂಡು




ನೀವು ನಿಮ್ಮ ಕಣ್ಣಿನ ರಕ್ಷಣೆ ಮಾಡಿಕೊಳ್ಳಿ ಎಂದು ಡಾ. ಮುರಳಿ ಕೃಷ್ಣನ್ ಹೇಳಿದರು.

ಗದಗ ರೋಟರಿ ಸಂಸ್ಥೆಯ ಅಧ್ಯಕ್ಷ ಪ್ರದೀಪ ಕುಲಕರ್ಣಿ ಮಾತನಾಡಿ, ನೀವೂ ಸಹ ರೋಟರಿ ಸಂಸ್ಥೆಯ ಸದಸ್ಯರಾಗಬಹುದು. ನಿಮ್ಮ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವ ಅನೇಕ ಯೋಜನೆಗಳು ರೋಟರಿ ಸಂಸ್ಥೆಯಲ್ಲಿವೆ. ಈ ಸಂಸ್ಥೆಯ ಸಾಮಾಜಿಕ ಕಾರ್ಯಗಳನ್ನು ನೀವು ನಿಮ್ಮ ಪರಿಸರದಲ್ಲಿ ತಿಳಿಸಿ, ಹೆಚ್ಚಿನ ಸಂಖ್ಯೆಯ ಜನರು ರೋಟರಿ ಸದಸ್ಯರಾಗುವಂತೆ ಪ್ರೇರಣೆ ನೀಡಬೇಕು. ಇಂದು ಈ ಶಾಲೆಯಲ್ಲಿ ನಮ್ಮ ಸಂಸ್ಥೆಯ ವತಿಯಿಂದ ಕಣ್ಣು ತಪಾಸಣೆ ಮತ್ತು ಉಚಿತ ಆರೋಗ್ಯ ಶಿಬಿರ ನೆರವೇರಿಸಲು ಅನುಕೂಲ ಮಾಡಿಕೊಟ್ಟ ಎಲ್ಲರಿಗೂ ಧನ್ಯವಾದಗಳು ಎಂದರು.

ಮುಖ್ಯ ಶಿಕ್ಷಕಿ ವಿ.ಎಸ್. ಚಲವಾದಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ವೇದಿಕೆಯ ಮೇಲೆ ಡಾ. ಮೂರ್ತಿ, ಡಾ. ಮಹೇಶ, ಸಂಸ್ಥೆಯ ಗೌರವ ಕಾರ್ಯದರ್ಶಿ ಎಂ.ಬಿ. ರಮಾಣಿ, ಆಡಳಿತ ಮಂಡಳಿಯ ಸದಸ್ಯರಾದ ಶ್ರೀಧರ ಕುಲಕರ್ಣಿ, ಶಿವಾನಂದ ಗೌಡನವರ, ಪಾಲಾಕ್ಷಯ್ಯ ಬಳಿಗೇರಿಮಠ ಇನ್ನೂ ಮುಂತಾದವರಿದ್ದರು. ಶಿಕ್ಷಕ ಪಿ.ಎಚ್. ತಾಂಬೋಟಿ ನಿರೂಪಿಸಿದರು. ಕೆ.ಆರ್. ಹಾಳಕೇರಿ ಸ್ವಾಗತಿಸಿದರು. ಶಿಕ್ಷಕಿ ಟಿ.ಜಿ. ಕಂಬಾಳಿಮಠ ವಂದಿಸಿದರು. ಶಿಬಿರದಲ್ಲಿ ಎಲ್ಲ ವಿದ್ಯಾರ್ಥಿಗಳ ಕಣ್ಣುಗಳ ಪರೀಕ್ಷೆ ನಡೆಯಿತು. ಉಪಸ್ಥಿತರಿದ್ದ ಸಂಸ್ಥೆಯ ಸದಸ್ಯರು ಮತ್ತು ಸಿಬ್ಬಂದಿಯವರ ನೇತ್ರ ತಪಾಸಣೆ ಮಾಡಲಾಯಿತು.

ಸಂಸ್ಥೆಯ ಅಧ್ಯಕ್ಷ ಆರ್.ವಿ. ಕುಲಕರ್ಣಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ರೋಟರಿ ಸಂಸ್ಥೆಯು ಈ ಹಿಂದೆಯೂ ನಮ್ಮ ಶಾಲೆಗೆ ಪೀಠೋಪಕರಣಗಳನ್ನು ನೀಡುವ ಮೂಲಕ ಮಹದುಪಕಾರವನ್ನು ಮಾಡಿದೆ. ಇಂದು ಇಲ್ಲಿಗೆ ಬಂದು ನಮ್ಮ ಶಾಲೆಯ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಯೊಂದಿಗೆ ಕಣ್ಣು ತಪಾಸಣೆಯನ್ನೂ ಮಾಡಿ ಅನೇಕ ಉತ್ತಮ ಸಲಹೆಗಳನ್ನು ನೀಡಿದ್ದಾರೆ. ಅದಕ್ಕಾಗಿ ಸಂಸ್ಥೆಯ ವತಿಯಿಂದ ಅವರಿಗೆ ಅಭಿನಂದನೆಗಳು ಎಂದರು.

# ಗಣೇಶನ ವಿಸರ್ಜನೆ ಮಾದರಿಯಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗಣೇಶ ವಿಸರ್ಜನೆ ಕಾರ್ಯದಲ್ಲಿ ಅತಿಯಾದ ಸಿಡಿಮದ್ದುಗಳ ಬಳಕೆ, ಡಿಜೆಯ ಅಬ್ಬರದ ಶಬ್ಧ ಮಾಲಿನ್ಯಗಳಿಂದ ಪರಿಸಕ್ಕೆ ಹಾನಿಯಾಗಲಿದ್ದು, ಸಂಪ್ರದಾಯಬದ್ಧವಾಗಿ ವಿಸರ್ಜನೆ ಕಾರ್ಯಕ್ರಮ ನಡೆಸಿದರೆ ಎಲ್ಲರಿಗೂ ಮಾದರಿಯಾಗುತ್ತದೆ ಎಂದು ಗೋವನಾಳ ಗ್ರಾ.ಪಂ ಮಾಜಿ ಅಧ್ಯಕ್ಷ ಮಂಜನಗೌಡ ಕೆಂಚನಗೌಡ್ರ ಹೇಳಿದರು.

ಅವರು ಗೋವನಾಳ ಗ್ರಾಮದ ಸ್ನೇಹಲೋಕ ಯುವಕ ಮಂಡಳ ವತಿಯಿಂದ ನಡೆದ ಗಣೇಶ ವಿಸರ್ಜನಾ ಕಾರ್ಯಕ್ರಮದಲ್ಲಿ ಮಾತನಾಡಿದರು.



ಈ ಸಂದರ್ಭದಲ್ಲಿ ಷಣ್ಮುಖಯ್ಯ ಗಡ್ಡದೇವರಮಠ, ಸ್ನೇಹಲೋಕ ಯುವಕ ಮಂಡಳದ ಅಧ್ಯಕ್ಷ ನಿಂಗನಗೌಡ ಮಣಕಟ್ಟಿ, ಮಲ್ಲಯ್ಯ ಹಿರೇಮಠ, ಬಸವರಾಜ್ ಮಲ್ಲೂರ, ನವೀನ್ ಕೊರಡೂರ, ಶಿವನಗೌಡ ಮಣಕಟ್ಟಿ, ದೀಪು ಹೊಸಮನಿ, ಧರ್ಮರಾಜ್ ಹಿತ್ತಲಮನಿ, ಲೋಹಿತ್ ಅಗಡಿ, ಸಂತೋಷ ಮೂತೆನವರ, ಸುರೇಶ್, ಶ್ರೀಕಾಂತ ಕೊರಡೂರ, ಷಣ್ಮುಖ ಕೊರಡೂರ, ನಿಂಗನಗೌಡ್ರು ಸಣ್ಣಗೌಡ್ರ ಸೇರಿದಂತೆ ಸ್ನೇಹಲೋಕ ಯುವಕ ಮಂಡಲ ಸದಸ್ಯರು, ಗ್ರಾಮಸ್ಥರು ಇದ್ದರು.

# ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯರ ಪ್ರವಾಸ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ರಾಮತ್ನಾಳ ಅವರು ಸೆಪ್ಟೆಂಬರ್ 18 ಹಾಗೂ 19ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ವಿವಿಧೆಡೆ ಭೇಟಿ ನೀಡುವರು. ಸೆ.18ರಂದು ಬೆಳಿಗ್ಗೆ 8.30 ಗಂಟೆಗೆ ಗದಗ ಜಿಲ್ಲೆಯ ಹಳ್ಳಿಗುಡಿ ಮೆಟ್ರಿಕ್ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡುವರು. 9.30 ಗಂಟೆಗೆ ಹಳ್ಳಿಗುಡಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ, ಬೆಳಿಗ್ಗೆ 10 ಗಂಟೆಗೆ ಜಂತ್ಲಿ ಶಿರೂರ ಗ್ರಾಮ ಪಂಚಾಯಿತಿ, 10.30 ಗಂಟೆಗೆ ಜಂತ್ಲಿ ಶಿರೂರು ಗ್ರಾಮದ ಅಂಗನವಾಡಿ ಕೇಂದ್ರಗಳಿಗೆ, 11 ಗಂಟೆಗೆ ಜಂತ್ಲಿ ಶಿರೂರ ಸರಕಾರಿ ಪ್ರೌಢಶಾಲೆ, 12.30 ಗಂಟೆಗೆ ಮುಂಡರಗಿ ಪೊಲೀಸ್ ಠಾಣೆ, ಮಧ್ಯಾಹ್ನ 1 ಗಂಟೆಗೆ ಮುಂಡರಗಿಯ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ, ಮಧ್ಯಾಹ್ನ 3.30 ಗಂಟೆಗೆ ಕೊರ್ಲಹಳ್ಳಿ ಆದರ್ಶ ವಿದ್ಯಾಲಯ, ಮಧ್ಯಾಹ್ನ 4.30 ಗಂಟೆಗೆ ಮುಂಡರಗಿ ತಾಲೂಕು ಆಸ್ಪತ್ರೆ, 5.30 ಗಂಟೆಗೆ ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗೆ ಭೇಟಿ ನೀಡುವರು. ಸೆ.19ರಂದು ಗದಗನಲ್ಲಿ ಜಿಲ್ಲಾ ಹಾಗು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಖಾಲಿಯಿರುವ ಹುದ್ದೆಗಳಿಗೆ ಮೀಸಲಾತಿ ನಿಗದಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವ್ಯಾಪ್ತಿಯಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ಖಾಲಿಯಿರುವ ಕರವಸೂಲಿಗಾರ ಮತ್ತು ಕಂಪ್ಯೂಟರ್ ಆಪರೇಟರ್ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಗಿನಂತೆ ಮೀಸಲಾತಿ ನಿಗದಿಪಡಿಸಲಾಗಿದೆ. ಸದರಿ ಮೀಸಲಾತಿ ಬಗ್ಗೆ ಏನಾದರೂ ಆಕ್ಷೇಪಣೆಗಳಿದ್ದಲ್ಲಿ ಈ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಲಿಖಿತವಾಗಿ ಗದಗ ಜಿಲ್ಲಾ ಪಂಚಾಯತ್ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ ವಸೂಲಿಗಾರ ಮೀಸಲಾತಿ ವಿವರ: ಶಿರಹಟ್ಟಿ ತಾಲೂಕು ಮಜ್ಜೂರ ಗ್ರಾ.ಪಂ-ಪರಿಶಿಷ್ಟ ಜಾತಿ, ನರಗುಂದ ತಾಲೂಕು ಚಿಕ್ಕನರಗುಂದ ಗ್ರಾ.ಪಂ -ಸಾಮಾನ್ಯ ಅಭ್ಯರ್ಥಿ, ಗದಗ ತಾಲೂಕು ಕಣಗಿನಹಾಳ ಗ್ರಾ.ಪಂ -ಪ್ರವರ್ಗ-1, ಗಜೇಂದ್ರಗಡ ತಾಲೂಕು ಲಕ್ಕಲಕಟ್ಟಿ ಗ್ರಾ.ಪಂ -ಸಾಮಾನ್ಯ ಅಭ್ಯರ್ಥಿ, ಗದಗ ತಾಲೂಕು ಲಿಂಗದಾಳ ಗ್ರಾ.ಪಂ-ಪ್ರವರ್ಗ-2(ಎ).

ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ ಮಿಸಲಾತಿ: ನರಗುಂದ ತಾಲೂಕು ಬೆನಕನಕೊಪ್ಪ ಗ್ರಾ.ಪಂ- ಪರಿಶಿಷ್ಟ ಜಾತಿ (ಇತರೆ), ರೋಣ ತಾಲೂಕು ಮಾಡಲಗೇರಿ ಗ್ರಾ.ಪಂ - ಸಾಮಾನ್ಯ ಅಭ್ಯರ್ಥಿ, ನರಗುಂದ ತಾಲೂಕು ಹುಣಸಿಕಟ್ಟಿ ಗ್ರಾ.ಪಂ-ಪರಿಶಿಷ್ಟ ಪಂಗಡ.

# ವಿಶ್ವಕರ್ಮ ಸಮಾಜದ ಕೊಡುಗೆ ಹಿರಿದು

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜಗತ್ತಿನ ಸೃಷ್ಟಿ ವಿಶ್ವಕರ್ಮಮನಿಂದಾಗಿದ್ದು, ವಿಶ್ವಕರ್ಮರು ಕಾಯಕ ಸಂಸ್ಕೃತಿಯನ್ನು ರೂಢಿಸಿಕೊಂಡು ಕಲೆ, ಶಿಲ್ಪಕಲೆ, ಸಂಗೀತ ಹೀಗೆ ಎಲ್ಲಾ ರಂಗಗಳಲ್ಲೂ ತಮ್ಮ ಸೂಕ್ಷ್ಮ ಕಲಾ ಪ್ರೌಢಿಮೆಯಿಂದ ಜಗತ್ತಿಗೆ ಅಮೋಘವಾದ ಕೊಡುಗೆ ನೀಡಿದ್ದಾರೆ ಎಂದು ಪುರಸಭೆ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ ಹೇಳಿದರು.

ಪಟ್ಟಣದ ಪುರಸಭೆ ಸಭಾ ಭವನದಲ್ಲಿ ಮಂಗಳವಾರ ನಡೆದ ವಿಶ್ವಕರ್ಮ ಜಯಂತಿ ಆಚರಣೆಯಲ್ಲಿ ವಿಶ್ವಕರ್ಮರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ವಿಶ್ವಕರ್ಮ ಸಮಾಜ ಇಂದು ಕುಶಲಕರ್ಮಿಗಳಾಗಿ ಸಮಾಜದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.



ಕಲೆಯನ್ನು ಗುರುತಿಸಿಕೊಟ್ಟ ಏಕೈಕ ಸಮಾಜವೆಂದರೆ ವಿಶ್ವಕರ್ಮ ಸಮಾಜ ಎಂದು ಬಣ್ಣಿಸಿದರು.

ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬೆಳಿಗ್ಗೆ ವಿಶ್ವಕರ್ಮ ಭಾವಚಿತ್ರದ ಮೆರವಣಿಗೆಯು ಸಕಲವಾದ್ಯ ಮೇಳದೊಂದಿಗೆ ಅದ್ದೂರಿಯಾಗಿ ನಡೆಯಿತು. ನಂತರ ಮೌನೇಶ್ವರ ದೇವಸ್ಥಾನದಲ್ಲಿ ವಿಶ್ವಕರ್ಮರಿಗೆ ಪಂಚಾಮೃತ ಅಭಿಷೇಕ, ವಿಶೇಷ ಪೂಜೆ ನಡೆಯಿತು. ನಂತರ ದೇವಸ್ಥಾನದ ಬಳಿ ಸಕಲ ಸದ್ಭಕ್ತರಿಗೆ ಮಹಾಪ್ರಸಾದ ವಿತರಣೆ ಜರುಗಿತು. ಈ ವೇಳೆ ಸಮಾಜದ ಅಧ್ಯಕ್ಷ ವಿರೂಪಾಕ್ಷಪ್ಪ ಬಡಿಗೇರ ಪುರಸಭೆ ಸದಸ್ಯ ಕನಕಪ್ಪ ಅರಳಿಗಿಡದ, ಹನಮಂತ ಮುದಗಲ್, ಶ್ರೀನಿವಾಸ ಸವದಿ, ವೀರೇಶ ಬಡಿಗೇರ, ರಂಗು ಕಮ್ಮಾರ, ಮಂಜು ಬಡಿಗೇರ, ವಿಠ್ಠಲ ಸವದಿ, ಎಚ್.ಎನ್.ಬಡಿಗೇರ, ಮೋನೇಶ ಗೋಗೇರಿ, ಮೌನೇಶ ಡಂಬಳ, ಮಲ್ಲಪ್ಪ ಬಡಿಗೇರ, ಮೌನೇಶ ಪತ್ತಾರ, ಪರುಶರಾಮ ಕಮ್ಮಾರ ಹಾಗೂ ಪುರಸಭೆಯ ಅಧಿಕಾರಿಗಳಾದ ಸಿ.ಡಿ. ದೊಡ್ಡಮನಿ, ಶಿವಪುತ್ರಪ್ಪ ಕಡೆತೋಟದ, ಜಿ.ಎನ್. ಕಾಳೆ, ಶಿವಕುಮಾರ ಇಲಾಳ, ಬಿ. ಮಲ್ಲಿಕಾರ್ಜುನಗೌಡ, ಎಂ.ಬಿ. ದೊಡ್ಡಮನಿ, ಗುರಪ್ಪ ಪಟ್ಟಣಶೆಟ್ಟಿ, ರಿಯಾಜ ಒಂಟಿ, ರಾಘವೇಂದ್ರ ಮಂತಾ, ಪಿ.ಎನ್. ದೊಡ್ಡಮನಿ ಸೇರಿ ಇತರರು ಇದ್ದರು.

# ಶ್ರೀ ಶಂಕರಮಠದಲ್ಲಿ ಪಿತೃಪಕ್ಷ ಆಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷದಂತೆ ಈ ವರ್ಷವೂ ಸಹ ಸೆ.18ರಿಂದ ಅಕ್ಟೋಬರ್ 2ರವರೆಗೆ ಸಂಭಾಪುರ ರಸ್ತೆಯ ಕೇಶವ ಪಾರ್ಕ್‌ನಲ್ಲಿರುವ ಶ್ರೀ ಶಂಕರ ಮಠದಲ್ಲಿ ತ್ರಿಮತಸ್ಥ ಬ್ರಾಹ್ಮಣರಿಗಾಗಿ ಶಾಸ್ತ್ರೋಕ್ತವಾಗಿ ಮಹಾಲಯ ಪಕ್ಷವನ್ನು ಮಾಡಿಸಲಾಗುತ್ತಿದೆ. ಎರಡು ದಿನ ಮುಂಚಿತವಾಗಿ ನೋಂದಣಿ ಮಾಡಿಸಬೇಕಿದ್ದು, ಹೆಚ್ಚಿನ ಮಾಹಿತಿಗಾಗಿ ರವಿ ಕುಲಕರ್ಣಿ-9880976863, ಗಣೇಶ ಭಟ್ ಪುರಾಣಿಕ-9845579970 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಸೆ.19ರಂದು ಗದಗನಲ್ಲಿ ಜಿಲ್ಲಾ ಹಾಗು ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ನಡೆಸುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ,**
**ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2024-25/1322

ದಿನಾಂಕ : 17-09-2024

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**
**Standard Bid Document KW-1&2 [ಏಕಲಕೋಟಿ ಪದ್ಧತಿ]**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1&2ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಮುಖಾಂತರ 32 ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ. **ಲೆಕ್ಕ ಶೀರ್ಷಿಕೆ:** 2024-25ನೇ ಸಾಲಿನ 2210-00-101-0-36 ಆಯುಷ್ ಇಲಾಖೆ ಕಟ್ಟಡಗಳ ನಿರ್ವಹಣೆ ಯೋಜನೆ/2023-24ನೇ ಸಾಲಿನ ವಿಶೇಷ ಆಕಾಂಕ್ಷಿ ಯೋಜನೆ/ 2024-25ನೇ ಸಾಲಿನ 2403-00-101-0-28 ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಕಟ್ಟಡಗಳ ಯೋಜನೆ/2023-24ನೇ ಸಾಲಿನ ಪದವಿಪೂರ್ವ ಇಲಾಖೆ ಕಟ್ಟಡಗಳ ಯೋಜನೆ/2024-25ನೇ ಸಾಲಿನ 2225-00-103-0-40 ಹಿಂದೂಳಿದ ವರ್ಗಗಳ ಇಲಾಖೆ ಯೋಜನೆ/2021-22 ಸಾಲಿನ 5054 ಮಳೆಹಾನಿ ಯೋಜನೆ/2024-25ನೇ ಸಾಲಿನ 2435-00-101-0-32 ತೋಟಗಾರಿಕೆ ಕಟ್ಟಡಗಳ ಯೋಜನೆ/2024-25ನೇ ಸಾಲಿನ 2405-00-101-0-27 ಮೀನುಗಾರಿಕೆ ಇಲಾಖೆ ಕಟ್ಟಡಗಳ ಯೋಜನೆ /2024-25ನೇ ಸಾಲಿನ 2406-00-101-0-28 ಸಾಮಾಜಿಕ ಅರಣ್ಯ ಇಲಾಖೆ ಮೂಲಭೂತ ಸೌಕರ್ಯ ಯೋಜನೆ /2024-25ನೇ ಸಾಲಿನ 2210-00-101-0-36 ಆರೋಗ್ಯ ಇಲಾಖೆ ಕಟ್ಟಡಗಳ ನಿರ್ವಹಣೆ ಯೋಜನೆ **ಅಡಿ** ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in)** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

Indent Nos : RDPR/2023-24/WORK_INDENT : **8852, 8906, 8843, 8896, 7212, 7202, 7210, 8806, 8804, 8661, 8522, 8454, 8371, 8611, 8612, 8627, 8629, 8630, 8944**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.51** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **16.72** ಲಕ್ಷಗಳು

**ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:-** ಅರ್ಜಿ ಬೆಲೆ **ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್** ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **18-09-2024** ರಿಂದ **04-10-2024** ರಂದು 16.30 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ : **07-10-2024** ರಂದು 16.35 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್. ಇಂಜಿನೀಯರಿಂಗ್ ವಿಭಾಗ,**
**ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/225/2024-25

### ಚಿಕ್ಕೊಪ್ಪ ಗ್ರಾಮದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮ

# ಪೌಷ್ಠಿಕ ಆಹಾರದಿಂದ ಉತ್ತಮ ಆರೋಗ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಗದಗ ಇವರ ಸಂಯುಕ್ತಾಶ್ರಯದಲ್ಲಿ ಗದಗ ತಾಲೂಕಿನ ಚಿಕ್ಕೊಪ್ಪ ಗ್ರಾಮದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಹುಯಿಲಗೋಳ ಗ್ರಾ.ಪಂ ಸದಸ್ಯರಾದ ಮಹೇಶಗೌಡ ಪಾಟೀಲ ಮಾತನಾಡಿ, ಹಿಂದಿನ ಪೀಳಿಗೆಯವರು ಉತ್ತಮ ಗುಣಮಟ್ಟದ ಆಹಾರವನ್ನು ಸೇವಿಸುತ್ತಿದ್ದರು. ಆದರೆ ಇಂದಿನ ಪೀಳಿಗೆಯು ಪಾಶ್ಚಾತ್ಯ ಆಹಾರ ಪದ್ಧತಿ ಹಾಗೂ ದುಶ್ಚಟಗಳಿಗೆ ಬಲಿಯಾಗುತ್ತಿದ್ದು, ಇದರಿಂದ ಮಕ್ಕಳ ಮೇಲೆ ನೇರ ಪ್ರಭಾವ ಬೀರಿ ಮೇಲಿಂದ ಮೇಲೆ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಈ ಕುರಿತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕಾರ್ಯಕರ್ತೆಯರು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದ್ದಾರೆ. ಗರ್ಭಿಣಿ, ಬಾಣಂತಿ ಹಾಗೂ ಮಕ್ಕಳ ಪೋಷಕರು ಇದರ ಸದುಪಯೋಗಪಡಿಸಿಕೊಂಡು ಸರಿಯಾದ ಆಹಾರ ಪದ್ಧತಿಯನ್ನು ರೂಢಿಸಿಕೊಳ್ಳಬೇಕೆಂದು ತಿಳಿಸಿದರು.

ರವೀಂದ್ರ ಕಳಸಣ್ಣವರ, ಸಮುದಾಯ ಆರೋಗ್ಯ ಅಧಿಕಾರಿ ಡಾ. ಮಹೇಶ ಭಜಂತ್ರಿ, ನೀಲವ್ವ ಕಡೇಯವರ, ಆರೋಗ್ಯ ಸಂರಕ್ಷಣಾಧಿಕಾರಿ ಡಾ. ನಜಿದಾ, ರಮೇಶ ಕಡೇಯವರ, ಕಲ್ಮೇಶ ವಡ್ಡಿನ, ನೀಲನಗೌಡ ಪಾಟೀಲ ಮುಂತಾದವರು ವೇದಿಕೆಯಲ್ಲಿದ್ದರು.




ಗರ್ಭಿಣಿಯರ ಸೀಮಂತ ಕಾರ್ಯಕ್ರಮ, ಪೌಷ್ಠಿಕ ಆಹಾರದ ಪ್ರಾತ್ಯಕ್ಷಿಕೆ, ಮಕ್ಕಳ ಜನ್ಮದಿನ ಆಚರಣೆ, ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ, ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯ ವಿಶೇಷ ನೊಂದಣಿ ಅಭಿಯಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ಸಂರಕ್ಷಣಾಧಿಕಾರಿ ರಾಜೇಶ್ವರಿ ಮೇಟಿ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುಳಾ ಕಮತ್, ವಲಯ ಮೇಲ್ವಿಚಾರಕಿ ಭುವನೇಶ್ವರಿ ಕುಂಬಾರ, ಪೋಷಣ ಅಭಿಯಾನ ಜಿಲ್ಲಾ ಸಂಯೋಜಕಿ ಸಂಗೀತಾ ಹೂಗಾರ, ಜಿಲ್ಲಾ ಸಹಾಯಕ ಪವನ ಕಾಟೀಗರ, ಮಿಶನ್ ಶಕ್ತಿ ಯೋಜನೆಯ ರಾಜೇಶ್ವರಿ ಉಪ್ಪಿನ್, ಮಧುಶ್ರೀ ಉಪ್ಪಾರ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಗರ್ಭಿಣಿಯರು, ತಾಯಂದಿರು, ಮಕ್ಕಳು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ವಿಜಯಲಕ್ಷ್ಮೀ ಭೋವಿ ಪ್ರಾರ್ಥಿಸಿದರು. ಜಿಲ್ಲಾ ಸಂಯೋಜಕರಾದ ಶ್ರೀಧರ ಪೂಜಾರ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪದ್ಮಾವತಿ ಜಿ ಮಾತನಾಡಿ, ಸೆಪ್ಟೆಂಬರ್ ಮಾಹೆಯಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವುದರ ಮೂಲಕ ಎಲ್ಲ ಅಂಗನವಾಡಿ ಕೇಂದ್ರಗಳಲ್ಲಿ ಉದ್ಘಾಟಿಸಲಾಗಿದೆ. ಎಲ್ಲರೂ ತಮ್ಮ ತಮ್ಮ ಮನೆಗಳಲ್ಲಿ ಪೌಷ್ಠಿಕ ಕೈತೋಟಗಳನ್ನು ನಿರ್ಮಿಸಿ ಪೌಷ್ಠಿಕ ಆಹಾರವನ್ನು ಸೇವಿಸಬೇಕು. ಇದರಿಂದ ನಮ್ಮ ಆರೋಗ್ಯವನ್ನು ನಾವು ಉತ್ತಮವಾಗಿರಿಸಿಕೊಳ್ಳಬಹುದು ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka